# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –304 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:30–06–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 304 | RNI No: KARKAN/2023/88462 | KA/SK/CTA-874/2024-2026 | Chitradurga | Date: 30-06-2025 Monday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಸರ್ಕಾರದ 2 ವರ್ಷ ಸಾಧನೆ ಕುರಿತು ವಸ್ತುಪ್ರದರ್ಶನಕ್ಕೆ ಸುಧಾಕರ್ ಚಾಲನೆ 2
ಡಿಸೆಂಬರ್‌ಗೆ ಕಾಂಗ್ರೆಸ್ ಅಧಿಕಾರ ಅಂತ್ಯ: ಸಂಸದ ಗೋವಿಂದ ಕಾರಜೋಳ 3
ವಿಶೇಷಚೇತನರಿಗೆ ಕರುಣೆ ತೋರದೆ ಹೆಚ್ಚಿನ ಅವಕಾಶ ಮತ್ತು ಸಮಾನ ಮನ್ನಣೆ ನೀಡಿ 4

ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಮಹಿಳಾ ಆಯೋಗದ ಅಧ್ಯಕ್ಷರ ಪ್ರವಾಸ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌಧರಿ ಅವರು ಇದೇ ಜೂನ್ 30ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಜೂನ್ 30ರಂದು ಬೆಳಿಗ್ಗೆ 8ಕ್ಕೆ ಬೆಂಗಳೂರಿನಿಂದ ಹೊರಟು ಬೆಳಿಗ್ಗೆ 11ಕ್ಕೆ ಹಿರಿಯೂರಿಗೆ ಆಗಮಿಸಿ, ಹಿರಿಯೂರಿನ ದೇವಗಿರಿ ನಗರದ ವಾಣಿ ವಿಲಾಸ ಕಾಲೇಜು ಹತ್ತಿರದ ಗಣಿ ಟ್ರಸ್ಟ್ ನೂತನ ಕಚೇರಿ ಮತ್ತು ಗ್ರಂಥಾಲಯದ ಉದ್ಘಾಟನೆ ಹಾಗೂ ಕಾಡುಗೊಲ್ಲ ಬುಡಕಟ್ಟು ಮಹಿಳಾ ಜಾಗೃತಿ ಕಾರ್ಯಕ್ರಮ ಉದ್ಘಾಟಿಸುವರು. ನಂತರ ಮಧ್ಯಾಹ್ನ 2ಕ್ಕೆ ಹಿರಿಯೂರು ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡುವರು. ಸಂಜೆ 4ಕ್ಕೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

### ಆರೋಗ್ಯ ತಪಾಸಣೆ

» ಚಿತ್ರದುರ್ಗ

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಚಿತ್ರದುರ್ಗ ಜಿಲ್ಲಾ ಶಾಖೆ, ಸೌಖ್ಯ ಹೆಲ್ತ್ ಮತ್ತು ಸ್ಕಿನ್ ಕೇರ್ ಚಿತ್ರದುರ್ಗ ಸಹಯೋಗದೊಂದಿಗೆ ವಿಶ್ವ ವೈದ್ಯರ ದಿನಾಚರಣೆ ಅಂಗವಾಗಿ ಜುಲೈ 01ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ ನಗರದ ವಿ.ಪಿ.ಬಡಾವಣೆಯ ಅರಣ್ಯ ಇಲಾಖೆ ವಸತಿಗೃಹ ಮುಂಭಾಗದ ಜೆ.ಸಿ.ಆರ್ ಮುಖ್ಯರಸ್ತೆಯಲ್ಲಿ “ಉಚಿತ ಆರೋಗ್ಯ ತಪಾಸಣಾ ಶಿಬಿರ” ಆಯೋಜಿಸಲಾಗಿದೆ. ವಿಶ್ವ ವೈದ್ಯರ ದಿನಾಚರಣೆ ಅಂಗವಾಗಿ ಬಿ.ಪಿ, ಶುಗರ್, ಚರ್ಮರೋಗ ತಪಾಸಣೆ, ದಂತ ಚಿಕಿತ್ಸಾ ಸಲಹೆ ಹಾಗೂ ಕಣ್ಣುಗಳನ್ನು ನುರಿತ ತಜ್ಞರಿಂದ ಪರಿಶೀಲಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

### ಮೊಹರಂ ಹಬ್ಬದ ಹಿನ್ನೆಲೆ: ಪೀರಲದೇವರ ಉತ್ಸವ ಆರಂಭ





» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಬಳ್ಳಾರಿ ರಸ್ತೆಯ ಎರಡನೇ ಕ್ರಾಸ್‌ನಲ್ಲಿರುವ ಪೀರಲದೇವರ ದೇವಸ್ಥಾನದಲ್ಲಿ ಮೊಹರಂ ಹಬ್ಬವನ್ನು ಭಕ್ತಿ, ಶ್ರದ್ಧೆಯಿಂದ ಆಚರಣೆ ಮಾಡಲಾಗುತ್ತಿದ್ದು, ಜುಲೈ 6ರ ಭಾನುವಾರದ ತನಕ ವಿವಿಧ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ ಎಂದು ದೇವಸ್ಥಾನದ ಭಕ್ತಮಂಡಳಿ ತಿಳಿಸಿದೆ. ಈಗಾಗಲೇ ಜೂನ್ 27ರ ಶುಕ್ರವಾರದಿಂದ ಗುದ್ದಲ್ಲಿ ಪೂಜೆ ಮೂಲಕ ಕಾರ್ಯಕ್ರಮ ಆರಂಭವಾಗಿದ್ದು, ಭಾನುವಾರ ಸಂಜೆ ಭವ್ಯ ಮೆರವಣಿಗೆಯೊಂದಿಗೆ ದೇವರ ಪೆಟ್ಟಿಗೆಯನ್ನು ಗುಡಿಯಲ್ಲಿ ಸ್ಥಾಪಿಸಲಾಯಿತು. ಇದಕ್ಕೂ ಮುನ್ನ ದೇವರ ಪೆಟ್ಟಿಗೆಯನ್ನು ಹೊತ್ತು ಪಾದಗಟ್ಟೆಗೆ ತೆರಳಿ ದೇವರನ್ನು ಪೂಜಿಸಿ ಹಳೇಟೌನ್ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ದೇವಸ್ಥಾನಕ್ಕೆ ಕರೆತರಲಾಯಿತು. ಜುಲೈ 3ರ ಗುರುವಾರ ಸಣ್ಣ ಕೆಂಡ, ಜುಲೈ 4ರ ಶುಕ್ರವಾರ ಹುಸಿ, ಜುಲೈ 5ರ ಶನಿವಾರ ಸಂಜೆ 6ರಿಂದ ಬೆಳಗಿನ ಜಾವದ 4ಗಂಟೆವರೆಗೂ ದೊಡ್ಡಕೆಂಡ ಜುಲೈ 6ರ ಭಾನುವಾರ ಸ್ವಾಮಿಯ ವಿಸರ್ಜನಾ ಕಾರ್ಯಕ್ರಮ ವಿರುತ್ತದೆ. ಹೆಚ್ಚಿನ ಸಂಖ್ಯೆಯ ಭಕ್ತರು ಸೇರಿ ದೇವರ ಕೃಪೆಗೆ ಪಾತ್ರರಾಗುವಂತೆ ಗೌಡ್ರರುದ್ರಣ್ಣ, ಚಿತ್ರಯ್ಯನಹಟ್ಟಿಸ್ವಾಮಿ, ಸುಭಾನ್‌ಸಾಬ್, ಸುಧಾಕರ್, ರಮೇಶ್ ಮನವಿ ಮಾಡಿದ್ದಾರೆ.

# ಪತ್ರಕರ್ತರ ಹಿತ ಕಾಯಲು ಬದ್ಧ: ಸುಧಾಕರ್

» ನಮ್ಮಜನ ಸಮಾಚಾರ

ಚಿತ್ರದುರ್ಗ: ಪತ್ರಕರ್ತರ ಬಹುದಿನಗಳ ಬೇಡಿಕೆಗೆ ಸ್ಪಂದಿಸಿ, 27.5 ಲಕ್ಷ ರೂ. ವೆಚ್ಚದಲ್ಲಿ ನೂತನ ವಾಹನಕ್ಕೆ ಟೆಂಡರ್ ಕರೆಯಲಾಗಿದೆ. ಶೀಘ್ರದಲ್ಲೇ ವಾರ್ತಾ ಇಲಾಖೆಗೆ ಹಸ್ತಾಂತರವಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಿಂದ ಹೈಟೆಕ್ ಮಾದರಿಯಲ್ಲಿ ನವೀಕರಿಸಲಾದ ಚಿತ್ರದುರ್ಗ ಪತ್ರಿಕಾ ಸಭಾ ಭವನ ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ 3 ದಶಕಗಳಿಂದ ರಾಜಕೀಯದಲ್ಲಿದ್ದೇನೆ. ಜನಪ್ರತಿನಿಧಿಗಳು, ಪತ್ರಕರ್ತರಿಗೆ ಸಂಘರ್ಷವಿಲ್ಲ. ಅಭಿವೃದ್ಧಿ ವಿಚಾರದಲ್ಲಿ ಗಮನ ಸೆಳೆಯುವಲ್ಲೂ ಮುಂಚೂಣಿಯಲ್ಲಿದ್ದಾರೆ ಎಂದರು.

ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಮಾತನಾಡಿ, ವರ್ಷದ ಹಿಂದೆ ಈ ಭವನದಲ್ಲಿ ಮೊದಲ ಬಾರಿ ಮಾತನಾಡಿದ ವೇಳೆ ನನಗೆ ಸರಿಯಾಗಿ ಕೇಳಿಸುತ್ತಿರಲಿಲ್ಲ. ಸಂಘದವರ ಒತ್ತಾಯದ ಮೇರೆಗೆ ಸಚಿವರ ಗಮನ ಸೆಳೆದು, ಜಿಲ್ಲಾ ಖನಿಜ ಪ್ರತಿಷ್ಠಾನದಿಂದ 25ಲಕ್ಷ ರೂ. ಅನುದಾನ ಬಿಡುಗಡೆಗೊಳಿಸಿ ನಿರ್ಮಿಸಲಾಗಿದೆ ಎಂದು ತಿಳಿಸಿದರು. ಪತ್ರಕರ್ತರಿಗೆ ಮುಖ್ಯವಾಗಿ ಸ್ಪಷ್ಟವಾಗಿ ಮಾತುಗಳು ಕೇಳಬೇಕು. ಅಲ್ಲದೆ, ಫೋಟೊಗಳಿಗೆ ಯಾವ ರೀತಿಯಲ್ಲೂ ಶೇಡ್ ಬೀಳಬಾರದು. ಅದಕ್ಕಾಗಿ ಪಿವಿಎಸ್ ಥಿಯೇಟರ್ ಮಾದರಿಯಲ್ಲಿ ಆಧುನಿಕ ತಂತ್ರಜ್ಞಾನ ಬಳಸಿ ಅಕಾಸ್ಟಿಕ್ ಆಡಿಯೋ ಥಿಯೇಟರ್‌ನಂತೆ ಅತ್ಯದ್ಭುತವಾಗಿ ನಿರ್ಮಾಣವಾಗಿದೆ ಎಂದರು. ನಿರ್ಮಿತಿ ಕೇಂದ್ರದವರು ಯಾವುದಾದರೂ ಕಾಮಗಾರಿ ಕೈಗೊಂಡರೆ ಹಾಳಾಗಲಿದೆ ಎಂಬ ಅಪಖ್ಯಾತಿ ಸಾಮಾನ್ಯ. ಆದರೆ, ಈ ಭವನವನ್ನು ಗುಣಮಟ್ಟದಿಂದ ನಿರ್ಮಿಸಿದ್ದಾರೆ. ಸಂಘದ ಈಗಿನ ಪದಾಧಿಕಾರಿಗಳ ಅವಧಿ ಕೆಲವೇ ತಿಂಗಳುಗಳಲ್ಲಿ ಮುಗಿಯಲಿದೆ. ಮುಂದೆ ಯಾರೇ ಬಂದರೂ ಅಭಿವೃದ್ಧಿ ಅಷ್ಟೇ ಮುಖ್ಯವಾಗಲಿ ಎಂದು ಸಲಹೆ ನೀಡಿದರು. ಎಡಿಸಿ ಬಿ.ಟಿ. ಕುಮಾರಸ್ವಾಮಿ ಮಾತನಾಡಿ, ಡಿಸಿ ಅವರು ಆಡಳಿತಾಧಿಕಾರಿ ಮಾತ್ರವಲ್ಲ. ತಾಂತ್ರಿಕ ನೈಪುಣ್ಯರು ಎಂಬುದಕ್ಕೆ ಈ ಸಭಾಭವನ ನಿದರ್ಶನ. ತರಾಸು ರಂಗಮಂದಿರ, ಕ್ರೀಡಾ ಭವನ ಕೂಡ ಅತ್ಯಾಧುನಿಕಶೈಲಿಯಲ್ಲಿನಿರ್ಮಿಸಲಾಗುತ್ತಿದೆ ಎಂದರು.

ಸಂಘದ ಜಿಲ್ಲಾಧ್ಯಕ್ಷ ದಿನೇಶ್ ಗೌಡಗೆರೆ ಮಾತನಾಡಿ, ಈ ಹಿಂದೆ ಚಿತ್ರದುರ್ಗ ಶಾಸಕರಾಗಿದ್ದ ಜಿ.ಎಚ್.ತಿಪ್ಪಾರೆಡ್ಡಿ 5 ಲಕ್ಷ ರೂ., ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಖನಿಜ ಪ್ರತಿಷ್ಠಾನದಿಂದ 25 ಲಕ್ಷ ರೂ., ಎಂಎಲ್ಸಿ ಕೆ.ಎಸ್.ನವೀನ್ 5 ಲಕ್ಷ ರೂ., ಕೆ.ಸಿ.ವೀರೇಂದ್ರ ಪಪ್ಪಿ 10ಲಕ್ಷ ರೂ. ಅನುದಾನ ನೀಡಿದ್ದರಿಂದಾಗಿ ಹವಾನಿಯಂತ್ರಿತ ಸಭಾಭವನ ಸೇರಿ ಇನ್ನಿತರೆ ಅಭಿವೃದ್ಧಿ ಕೈಗೊಳ್ಳಲಾಗಿದೆ. ಹೊಳಲ್ಕೆರೆ, ಮೊಳಕಾಲ್ಮೂರು ಭವನ ಕೂಡ ಕೆಲವೇ ದಿನಗಳಲ್ಲೇ ಉದ್ಘಾಟನೆ ಆಗಲಿದೆ. ಹೊಸ ಬದಲಾವಣೆಗೆ ನಾಂದಿಯಾಡಿದ್ದು, ಎಲ್ಲ ಪತ್ರಕರ್ತರ ಸಹಕಾರವಿದೆ ಎಂದು ತಿಳಿಸಿದರು.

ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂ ರಾವ್ ಮಾತನಾಡಿ, ಪತ್ರಕರ್ತರು ಸರ್ಕಾರದ ಯೋಜನೆಗಳ ಕುರಿತು ಬೆಳಕು ಚೆಲ್ಲುವಲ್ಲಿ ವಾರ್ತಾ ಇಲಾಖೆಯೊಂದಿಗೆ ಸೇತುವೆಯಾಗಿ ಕೆಲಸ ಮಾಡುತ್ತಿದ್ದಾರೆ. ನೀರಿನ ಸಮಸ್ಯೆ ಉಂಟಾಗಿದ್ದರಿಂದ ಇಲಾಖೆ ಜಾಗದಲ್ಲಿ ಡಿಸಿ ಅವರ ಸೂಚನೆ ಮೇರೆಗೆ ಕೊಳವೆಬಾವಿ ಕೊರೆಸಲಾಗಿದೆ. ಇದರಿಂದ ಡಿಸಿ ಕಚೇರಿ, ಇಲಾಖೆ, ಪತ್ರಕರ್ತರ ಸಂಘ, ಸಂಘದ ಕ್ಯಾಂಟೀನ್‌ಗೂ ಅನುಕೂಲವಾಗಿದೆ ಎಂದರು.

ಇದೇ ವೇಳೆ ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯ ಎಂ.ಎನ್. ಅಹೋಬಳಪತಿ ಅವರನ್ನು ಸನ್ಮಾನಿಸಲಾಯಿತು. ಡಿವೈಎಸ್ಪಿ ದಿನಕರ್, ಕೂಡಾ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಶಿವಣ್ಣ ಇತರರಿದ್ದರು. ಸಂಘದ ಜಿಲ್ಲಾ ಖಜಾಂಚಿ ಡಿ. ಕುಮಾರಸ್ವಾಮಿ ಸ್ವಾಗತಿಸಿದರು. ಕಾರ್ಯದರ್ಶಿ ವಿನಾಯಕ ಬಿ.ಎಸ್. ತೊಡರನಾಳ್ ನಿರೂಪಿಸಿದರು. ರವಿ ಉಗ್ರಾಣ ವಂದಿಸಿದರು. ಕಾರ್ಯದರ್ಶಿಗಳಾದ ನಾಗರಾಜ್ ಕಟ್ಟೆ, ವಿ. ವೀರೇಶ್ (ಅಪ್ಪು), ರಾಷ್ಟ್ರೀಯ ಮಂಡಳಿ ಸದಸ್ಯ ಸಿ. ಹೆಂಜಾರಪ್ಪ ಇತರರಿದ್ದರು.



> ಸಂಘದ ವಿಚಾರದಲ್ಲಿ ಚಿತ್ರದುರ್ಗ ಜಿಲ್ಲೆಗೆ ಐಡೆಂಟಿಟಿ ಇರಲಿಲ್ಲ. ಆದರೀಗ ನಮ್ಮ ಸಂಘದತ್ತ ಎಲ್ಲರ ಚಿತ್ತ ಹರಿದಿದೆ. ಡಿಸಿ ಅವರೇ ಖುದ್ದು ತಾಂತ್ರಿಕ ಸಲಹೆಗಾರರಾಗಿ ಭವನಕ್ಕಾಗಿ ಶ್ರಮಿಸಿದ್ದಾರೆ. ದತ್ತಿ ನಿಧಿ ಕಾರ್ಯಕ್ರಮ ಯಶಸ್ಸಿಗೆ ಜಿಲ್ಲಾಡಳಿತ ಸಹಕರಿಸಿದೆ.
>
> » **ಎಂ.ಎನ್. ಅಹೋಬಳಪತಿ, ಪತ್ರಕರ್ತ**

> ರಾಜ್ಯ ಸಂಘದಲ್ಲಿ 1 ಕೋಟಿ ರೂ. ಠೇವಣಿ ಇದೆ. ತಾಂತ್ರಿಕವಾಗಿ ಕೋಲಾರಕ್ಕಿಂತ ಅತ್ಯದ್ಭುತವಾಗಿ ಚಿತ್ರದುರ್ಗ ಜಿಲ್ಲಾ ಸಂಘದ ಭವನ ನವೀಕೃತವಾಗಿದೆ.
>
> » **ವಾಸುದೇವ ಹೊಳ್ಳ, ಸಂಘದ ರಾಜ್ಯ ಖಜಾಂಚಿ**

### ಸಂಘದ ಮನವಿಗೆ ಸರ್ಕಾರ ಸ್ಪಂದಿಸಿದೆ

ಸಂಘ ಸಲ್ಲಿಸಿದ ಮನವಿಗೆ ಸ್ಪಂದಿಸಿರುವ ಸಿಎಂ ಸಿದ್ದರಾಮಯ್ಯ ಅವರು ಪತ್ರಿಕಾ ದಿನಾಚರಣೆಯಂದು ಗ್ರಾಮೀಣ ಭಾಗದ ಪತ್ರಕರ್ತರಿಗೆ ಉಚಿತ ಬಸ್ ಪಾಸ್, ಪತ್ರಕರ್ತರಿಗೆ ಆರೋಗ್ಯ ವಿಮೆಗೆ ಸಾಂಕೇತಿಕವಾಗಿ ಚಾಲನೆ ನೀಡಲಿದ್ದಾರೆ ಎಂದು ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ್ ತಿಳಿಸಿದರು. ಡಿವಿಜಿ ಅವರ ಸಾರಥ್ಯದಲ್ಲಿ ಮೈಸೂರು ಒಡೆಯರ ದೇಣಿಗೆಯಿಂದ ಆರಂಭವಾದ ಸಂಸ್ಥೆಯನ್ನು ಈಗಿನ ಶಿವಾನಂದ ತಗಡೂರು ಉತ್ತಮ ರೀತಿಯಲ್ಲಿ ಮುನ್ನಡೆಸುತ್ತಿದ್ದಾರೆ ಎಂದರು.

### ಪತ್ರಕರ್ತರ ನಿವೇಶನ ಮಂಜೂರು ಮಾಡಲು ಕಾನೂನು ತೊಡಕು ನಿವಾರಿಸಿ: ರಘುಮೂರ್ತಿ

ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ ಮಾತನಾಡಿ, ಜಿಲ್ಲೆಯ ಜನಪ್ರತಿನಿಧಿಗಳ ಸಹಕಾರದಿಂದ ಪತ್ರಕರ್ತರ ಸಂಘಕ್ಕೆ 45 ಲಕ್ಷ ರೂ. ಅನುದಾನ ಬಿಡುಗಡೆಯಾಗಿದ್ದು, ನವೀಕೃತಗೊಂಡಿರುವುದು ಉತ್ತಮ ಬೆಳವಣಿಗೆ. ಪತ್ರಕರ್ತರಿಗೆ ನಿವೇಶನ ಮಂಜೂರು ಮಾಡಲು ತೊಡಕುಗಳಿದ್ದರೆ ಬಗೆಹರಿಸಿ, ಕಾನೂನಾತ್ಮಕವಾಗಿ ನೀಡಲು ಜಿಲ್ಲಾ ಸಚಿವರು, ಡಿಸಿ, ಎಡಿಸಿ ಕ್ರಮವಹಿಸಲಿ ಎಂದು ಒತ್ತಾಯಿಸಿದರು. ಭವನಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ಹೆಸರಿಟ್ಟಿರುವುದು ಸ್ವಾಗತಾರ್ಹ. ಸ್ವತಃ ಪತ್ರಕರ್ತರೂ ಆಗಿದ್ದ ಅವರು 1920ರಲ್ಲಿ ಮೂಕನಾಯಕ, 1927ರಲ್ಲಿ ಬಹಿಷ್ಕೃತ ಭಾರತ, 1928ರಲ್ಲಿ ಸಮತಾ, 1930ರಲ್ಲಿ ಜನತಾ, 1956 ಪ್ರಬುದ್ಧ ಭಾರತ ಹೀಗೆ ಸಾಮಾಜಿಕ ಆಂದೋಲನದ ಬಲವರ್ಧನೆಗಾಗಿ ಹೊರತಂದ ಐದು ಪತ್ರಿಕೆಗಳಾಗಿವೆ. ಸಮಾಜ ಮುನ್ನಡೆಸುವಲ್ಲಿ ಪತ್ರಕರ್ತರ ಪಾತ್ರ ದೊಡ್ಡದಿದೆ ಎಂದರು.

## ಪ್ರಮುಖ ಸುದ್ದಿ

### ಶನಿವಾರ ಬಂದ್ ನಿಮಿತ್ತ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿ, ಶಾಸಕ ಬಿ.ಜಿ. ಗೋವಿಂದಪ್ಪ ಹೇಳಿಕೆ

# ಹೊಸದುರ್ಗಕ್ಕೆ ಭದ್ರಾ ನೀರು ಬಾರದಿದ್ದಲ್ಲಿ ಹೋರಾಟ

» ಹೊಸದುರ್ಗ

ಭದ್ರಾ ಜಲಾಶಯದಿಂದ ನೀರು ತರಲು ಈಗಾಗಲೇ ಸಕಲ ಸಿದ್ಧತೆ ಮಾಡಿಕೊಂಡಿದ್ದು, ಶೇ. 80 ರಷ್ಟು ಕಾಮಗಾರಿಯೇ ಮುಗಿದಿದೆ. ಆದರೀಗ ಬಲದಂಡೆಯಿಂದ ನೀರು ತರಲು ದಾವಣಗೆರೆ ರೈತರು ಹಾಗೂ ಮುಖಂಡರು ಆಕ್ಷೇಪ ವ್ಯಕ್ತಪಡಿಸುವುದು ಸರಿಯಲ್ಲ. ಇದು ಹೀಗೆ ಮುಂದುವರಿದರೆ, ಮುಂದಿನ ಕ್ರಮ ಕೈಗೊಳ್ಳಲಾಗುವುದು. ಅಲ್ಲದೇ ಹೊಸದುರ್ಗಕ್ಕೆ ನೀರು ಬಾರದಿದ್ದರೆ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗುವುದು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ ಭದ್ರಾ ಬಲದಂಡೆಯಿಂದ ನೀರು ತರುವುದಕ್ಕೆ ಕೆಲವರು ಅಡ್ಡಿ ಪಡಿಸುತ್ತಿರುವುದು ಸರಿಯಲ್ಲವೆಂದು ಖಂಡಿಸಿ, ಶನಿವಾರ ನಡೆದ ಬಂದ್ ನಿಮಿತ್ತವಾಗಿ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿ ಮಾತನಾಡಿದರು.

ಈ ಹಿಂದೆ 2013 ರಲ್ಲಿ ಹೊಸದುರ್ಗ ಕುಡಿಯುವ ನೀರನ್ನು ಪರಿಶೀಲಿಸಿದ ಅಧಿಕಾರಿಗಳು, ಈ ನೀರಿನಲ್ಲಿ ಉಪ್ಪಿನ ಅಂಶ ಹಾಗೂ ಫ್ಲೋರೈಡ್ ಅಂಶ ಅಧಿಕವಾಗಿರುವುದರಿಂದ ಕುಡಿಯಲು ಯೋಗ್ಯವಲ್ಲ ಎಂಬ ವರದಿ ನೀಡಿದ್ದರು. ಹಾಗಾಗಿ, ತಾಲ್ಲೂಕಿನ ಎಲ್ಲಾ ಹಳ್ಳಿಗಳಿಗೂ ಶುದ್ಧ ಕುಡಿಯುವ ನೀರು ಒದಗಿಸಲು 830 ರೂ.ಕೋಟಿ ಮೀಸಲಿಡಲಾಗಿದೆ. ಐಐಟಿ ತಂಡ ಗುರುವಾರ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಕಾರಾತ್ಮಕವಾಗಿ ವರದಿ ಸಲ್ಲಿಸಿದ್ದು, ದಾವಣಗೆರೆಯವರು ಒಮ್ಮೆ ಪರಿಶೀಲಿಸಬೇಕು. ಬಲದಂಡೆಯಿಂದ ಹೊಸದುರ್ಗದವರು ನೀರು ಪಡೆದರೆ, ಯಾರಿಗೂ ತೊಂದರೆಯಾಗುವುದಿಲ್ಲ ಎಂದು ಹೇಳಿದರು. ದಾವಣಗೆರೆ ಜಿಲ್ಲೆಯ ಕೆಲವು ಮುಖಂಡರು ಮತ್ತು ರೈತರು ಹೊಸದುರ್ಗಕ್ಕೆ ನೀರು ತೆಗೆದುಕೊಂಡು ಹೋಗಲು ಬಿಡುವುದಿಲ್ಲವೆಂದು ಕ್ಯಾತೆ ತೆಗೆದಿದ್ದಾರೆ. 21 ನಾಲೆಯಲ್ಲಿ ಬೇರೆ ಜಿಲ್ಲೆಗಳ ಜನರಿಗೆ ಕುಡಿಯಲು ನೀರು ಹೋಗುತ್ತಿದ್ದು, ನಮ್ಮನ್ನು ಪ್ರಶ್ನಿಸುವವರು, ಅವರನ್ನೇಕೆ ಪ್ರಶ್ನೆ ಮಾಡುತ್ತಿಲ್ಲ? ಬೇರೆ ಕಡೆಗೆ ನೀರು ಕೊಡುವಾಗ ಏಕೆ ಸುಮ್ಮನಿದ್ದರು. ಭಾರತೀಯ ವಿಜ್ಞಾನ ಸಂಸ್ಥೆ ಈಗಾಗಲೇ ಡ್ಯಾಂಗೆ ಭೇಟಿ ನೀಡಿ, ಪರಿಶೀಲನೆ ನಡೆಸಲಾಗಿದ್ದು, ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆ. ಈ ಹೋರಾಟ ಯಾರ ಪರವೂ ಅಲ್ಲ, ಯಾರ ವಿರುದ್ಧವೂ ಅಲ್ಲ. ನಾವು ನಮ್ಮ ತಾಲ್ಲೂಕಿನ ಜನತೆಗೆ ಕುಡಿಯುವ ನೀರು ಪೂರೈಸಲು ಒಗ್ಗಟ್ಟಾಗಿ ಹೋರಾಟ ಮಾಡುತ್ತಿದ್ದೇವೆ ಎಂದರು.

ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ್ ಮಾತನಾಡಿ, ಮಹಾರಾಜರ ಅವಧಿಯಲ್ಲಿ ನಿರ್ಮಾಣವಾದ ವಾಣಿವಿಲಾಸ ಸಾಗರದಲ್ಲಿ ಹೊಸದುರ್ಗ ತಾಲೂಕಿನ ರೈತರ ಬಹುತೇಕ ಜಮೀನುಗಳು ಮುಳುಗಡೆಯಾಗಿದ್ದವು. ಈ ರೈತರು ಇಂದಿಗೂ ಇದರ ಉಪಯೋಗ ಪಡೆದುಕೊಂಡಿಲ್ಲ, ಹಿರಿಯೂರಿನ ತಾಲೂಕಿನ ರೈತರಿಗೆ ಎಂದಿಗೂ ತೊಂದರೆ ನೀಡಿಲ್ಲ, ದಾವಣಗೆರೆಯಲ್ಲಿ ಭದ್ರಾ ಮೇಲ್ದಂಡೆ. ವಿಚಾರವಾಗಿ ಕೆಲ ನಿರುದ್ಯೋಗಿ ರಾಜಕಾರಣಿಗಳು ರೈತರ ಸೋಗಿನಲ್ಲಿ ಪ್ರತಿಭಟನೆ ಮಾಡುತ್ತಿದ್ದಾರೆ. ರಾಜಕೀಯಕ್ಕಾಗಿ ಭದ್ರಾ ನೀರನ್ನು ಬಳಕೆ ಮಾಡಿಕೊಳ್ಳಬೇಡಿ. ಇಡೀ ಒಂದು ತಾಲ್ಲೂಕು ವ್ಯಥೆ ಪಡುವಂತೆ ಮಾಡಬೇಡಿ. ನಿಮ್ಮಗಳ ಕ್ಷೇತ್ರದಲ್ಲಿದ್ದು ಸೇವೆ ಮಾಡಿ, ಜನರ ವಿಶ್ವಾಸ ಪಡೆಯಿರಿ. ಸ್ವಂತ ಲಾಭಕ್ಕಾಗಿ ಕುಡಿಯುವ ನೀರನ್ನು ತಡೆಹಿಡಿಯಬೇಡಿ. ಈ ಯೋಜನೆ ದಾರಿತಪ್ಪಿದರೆ ಉಗ್ರ ಹೋರಾಟ ಮಾಡಿ, ನೀರನ್ನು ತಂದೆ ತರುತ್ತೇವೆ ಎಂದು ಹೇಳಿದರು. ನಗರದ ವೀರಭದ್ರೇಶ್ವರ ಸ್ವಾಮಿ ದೇವಾಲಯದಿಂದ ಆರಂಭವಾದ ಪ್ರತಿಭಟನೆ ಮದಕರಿ ವೃತ್ತ, ಬಸವೇಶ್ವರ ವೃತ್ತ, ಗಾಂಧಿ ವೃತ್ತದ ಮಾರ್ಗವಾಗಿ ಟಿ.ಬಿ. ವೃತ್ತದ ಮೂಲಕ ಸಂಚರಿಸಿ ಮುಖ್ಯಮಂತ್ರಿಗಳಿಗೆ ತಹಶೀಲ್ದಾರ್ ಮೂಲಕ ಮನವಿ ಸಲ್ಲಿಸಲಾಯಿತು.

ಪುಟ ↘ 2



> ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ 830 ಕೋಟಿ ರೂ. ಹಣ ಬಿಡುಗಡೆಯಾಗಿದ್ದು, ಈಗಾಗಲೇ ಕಾಮಗಾರಿಗೆ ಶೇ.80 ರಷ್ಟು ಸರ್ಕಾರದ ಹಣವನ್ನು ಯೋಜನೆಗೆ ವ್ಯಯಿಸಲಾಗಿದೆ. ಈ ಯೋಜನೆ ಮುಗಿಯುವ ಹಂತಕ್ಕೆ ಬಂದಿರುವ ಸಮಯದಲ್ಲಿ ವಿರೋಧಿಸುವ ದಾವಣಗೆರೆ ಮುಖಂಡರು, ಈ ಯೋಜನೆಗೆ ಚಾಲನೆ ನೀಡಿದಾಗ ನೀವು ನಿದ್ದೆ ಮಾಡುತ್ತಿದ್ದಿರಾ? ಒಂದು ಕಡೆ 20 ಕಿಲೋ ಮೀಟರ್‌ಗೊಂದು ಡ್ಯಾಂ ಮತ್ತು ಇನ್ನೊಂದು ಕಡೆ 70 ಕಿಲೊಮೀಟರ್‌ಗೊಂದು ಡ್ಯಾಂ ಮಧ್ಯೆ ಇರುವ ನಾವುಗಳು ಇದುವರೆಗೂ ನೀರನ್ನು ಪಡೆಯಲಾಗಿಲ್ಲ. ಇದುವರೆಗೂ ನಮಗೆ ನೀರು ಸಿಕ್ಕಿಲ್ಲ. ಇದು ಯಾವ ನ್ಯಾಯ? ನಾವೇನೂ ಪಾಪ ಮಾಡಿದ್ದೇವೆ? ದಾವಣಗೆರೆಯವರು ಜಮೀನುಗಳಿಗೆ ಹಾಗೂ ಕುಡಿಯಲು ನೀರು ಪಡೆದಿದ್ದೀರಿ. ಆದರೆ, ಈಗ ನಮಗ್ಯಾಕೆ ವಿರೋಧ ಮಾಡುತ್ತಿದ್ದೀರಿ? ನಾವು ಇದನ್ನು ಉಗ್ರವಾಗಿ ವಿರೋಧಿಸುತ್ತೇವೆ.
>
> » **ಎಸ್.ಲಿಂಗಮೂರ್ತಿ ಮಾಜಿ ಅಧ್ಯಕ್ಷರು, ಕರ್ನಾಟಕ ರಾಜ್ಯ ಖನಿಜ ನಿಗಮ, ಬೆಂಗಳೂರು**

## ಫಾಸ್ಟ್ ನ್ಯೂಸ್

### ಹೊಸದುರ್ಗಕ್ಕೆ ಭದ್ರಾ ನೀರು ಬಾರದಿದ್ದಲ್ಲಿ ಹೋರಾಟ: ಗೋವಿಂದಪ್ಪ

» ಮೊದಲ ಪುಟದಿಂದ

ಬೆಳಗ್ಗೆಯಿಂದಲೇ ನಗರದ ವರ್ತಕರು ತಮ್ಮ ಅಂಗಡಿ ಮುಂಗಟ್ಟುಗಳನ್ನು ಮುಚ್ಚಿ ಇಡೀ ದಿನ ಬಾಗಿಲು ತೆರೆಯದೆ ಬಂದ್ ಗೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದರು. ಇದೇ ವೇಳೆ ಉದ್ಯಮಿ ಸದ್ಗುರು ಪ್ರದೀಪ್, ರೈತ ಸಂಘದ ಅಧ್ಯಕ್ಷ ಚಿತ್ತಪ್ಪ, ನೀರಾವರಿ ಹೋರಾಟಗಾರ ಚಿಕ್ಕಪ್ಪನಹಳ್ಳಿ ಷಣ್ಮುಖ, ಕೆಪಿಸಿಸಿ ಸದಸ್ಯರುಗಳಾದ ಎಂ.ಪಿ.ಶಂಕರ್, ಅಲ್ತಾಫ್ ಪಾಷಾ, ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಗಣೇಶ್ ಮೂರ್ತಿ, ಪುರಸಭೆ ಅಧ್ಯಕ್ಷೆ ರಾಜೇಶ್ವರಿ ಆನಂದ್, ಉಪಾಧ್ಯಕ್ಷೆ ಗೀತಾ ಆಸಂದಿ, ಕೆಪಿಸಿಸಿ ಕಾರ್ಮಿಕ ಘಟಕದ ರಾಜ್ಯ ಕಾರ್ಯದರ್ಶಿ ಗಿರಿಜಾ ಆಚಾರ್, ಮುಖಂಡರುಗಳಾದ ಕೆ.ಎಸ್.ಕಲ್ಮಠ್, ಗೋ ತಿಪ್ಪೇಶ್, ಗೂಳಿಹಟ್ಟಿ ಕೃಷ್ಣಮೂರ್ತಿ, ಸಿಂಧು ಅಶೋಕ್, ಜಗದೀಶ್ ನಾಯಿಗೆರೆ, ಬೋಕಿಕೆರೆ ನಾಗರಾಜ್, ಬಸವರಾಜ್ ಕೆ. ಅನಂತ್, ಬುರುಡೇಕಟ್ಟೆ ರಾಜೇಶ್, ಹೆಬ್ಬಳ್ಳಿ ಮಲ್ಲಿಕಾರ್ಜುನ್, ವಾಲ್ಮೀಕಿ ರವಿತೇಜ, ಲಿಂಗದೇವರು, ಲಕ್ಕಿಗುರು, ರೈತ ಸಂಘ, ಮಹಿಳಾ ಸಂಘ, ವಿವಿಧ ಸಂಘ-ಸಂಸ್ಥೆಗಳ ಸದಸ್ಯರು ಸೇರಿದಂತೆ ಸಾವಿರಾರು ಜನರಿದ್ದರು ಸೇರಿದ್ದರು.

### ಪತಿಯ ದೈಹಿಕ ಹಿಂಸೆ ತಾಳದೆ ಗೃಹಿಣಿ ಆತ್ಮಹತ್ಯೆ

» ಚಳ್ಳಕೆರೆ

ಪ್ರತಿನಿತ್ಯ ಪತಿ ನೀಡುತ್ತಿದ್ದ ಮಾನಸಿಕ, ದೈಹಿಕ ಹಿಂಸೆಯನ್ನು ತಾಳಲಾರದೆ ಗಂಡನ ಕಿರುಕುಳದಿಂದ ಬೇಸತ್ತ ಪತ್ನಿ ಮನೆಯಲ್ಲೇ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಗೋಪನಹಳ್ಳಿ ಗ್ರಾಮದ ಗೊಲ್ಲರಹಟ್ಟಿಯಲ್ಲಿ ಜೂನ್ 28ರ ಸಂಜೆ ನಡೆದಿದೆ. ಮೃತಪಟ್ಟಳು ದೇವರಮರಿಕುಂಟೆಯ ವಿ.ಸುಶ್ಮಿತಾ(27) ಈಕೆಯನ್ನು ಕಳೆದ 2016ರಲ್ಲಿ ಗೋಪನಹಳ್ಳಿಯ ಮಹಲಿಂಗಪ್ಪ ಎಂಬುವವರಿಗೆ ಕೊಟ್ಟುಮದುವೆ ಮಾಡಿದ್ದು ದಂಪತಿಗಳಿಗೆ ಅವಳಿ ಮಕ್ಕಳಿದ್ದು ಇತ್ತೀಚಿನ ದಿನಗಳಲ್ಲಿ ಗಂಡ ಮಹಲಿಂಗಪ್ಪ ಮನೆಗೆ ಸರಿಯಾಗಿ ಬಾರದೆ ಪತ್ನಿ ಹಾಗೂ ಮಕ್ಕಳೊಂದಿಗೆ ಅನ್ಯೂನವಾಗಿರದೆ ಪತ್ನಿ ಕೇಳಿದರೆ ಆಕೆಯ ಮೇಲೆ ದೌರ್ಜನ್ಯ ನಡೆಸುತ್ತಾ ನೀನು ಎಲ್ಲಾದರೂ ಹೋಗಿ ಸಾಯಿ, ಇಲ್ಲ ನಾನೇ ಸಾಯಿಸುತ್ತೇನೆಂದು ರೇಗಾಡುತ್ತಿದ್ದು, ನೊಂದ ಪತ್ನಿ ಸುಶ್ಮಿತ ಆತ್ಮಹತ್ಯೆ ಮಾಡಿಕೊಂಡಿರುತ್ತಾಳೆಂದು ಸುಶ್ಮಿತಾಳ ಸಹೋದರ ವಿ.ನಾಗರಾಜು ಪೊಲೀಸರಿಗೆ ದೂರು ನೀಡಿದ್ದಾನೆ. ಪಿಎಸ್‌ಐ ಈರೇಶ್ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದು ಆರೋಪಿ ಪತಿಮಹಲಿಂಗಪ್ಪ(38) ನ್ಯಾಯಾಂಗ ವಶಕ್ಕೆ ನೀಡಿರುತ್ತಾರೆ.

### ಜೂಜಾಟ; 6 ಜನರ ವಶ, 7350ರೂ ಹಣ ಸೀಜ್

» ಚಳ್ಳಕೆರೆ

ಕಸ್ತೂರಿತಿಮ್ಮನಹಳ್ಳಿ-ದೇವರಮರಿಕುಂಟೆ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಜೂಜಾಟವಾಡುತ್ತಿದ್ದ ಅದೇ ಗ್ರಾಮದ ಶ್ರೀನಿವಾಸ್ ಹಾಗೂ ಇತರೆ ಆರು ಜನರನ್ನು ವಶಕ್ಕೆ ಪಡೆದ ಪೊಲೀಸರು ಜೂಜಾಟದ ಹಣ 7350 ವಶಪಡಿಸಿಕೊಂಡಿರುತ್ತಾರೆ. ಠಾಣಾಧಿಕಾರಿ ಖಲಂದರ್‌ಖಾನ್, ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ಧಾರೆ.

### ದೊಡ್ಡೇರಿ ಬಳಿ ಆಟೋ-ಬೈಕ್ ಡಿಕ್ಕಿ : ದೇವರಮರಿಕುಂಟೆಯ ಆರು ಜನರಿಗೆ ಗಾಯ



» ಚಳ್ಳಕೆರೆ

ದೊಡ್ಡೇರಿ ಸೇತುವೆ ಮಾರ್ಗಮಧ್ಯದಲ್ಲಿ ಮೋಟಾರ್ ಬೈಕ್ ಆಟೋರಿಕ್ಷಕ್ಕೆ ಡಿಕ್ಕಿ ಹೊಡೆದ ಪರಿಣಾಮ ಆಟೋರಿಕ್ಷಾದಲ್ಲಿ ಪ್ರಯಾಣಿಸುತ್ತಿದ್ದ ಆರು ಜನರು ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ಧಾರೆ. ಗಾಯಾಳು ಕುರುಬರಹಟ್ಟಿಯ ಮಂಜುನಾಥ ನೀಡಿದ ದೂರಿನ ಆಧಾರದ ಮೇಲೆ ಮೋಟಾರ್‌ಬೈಕ್ ಚಾಲಕ ದೇವರಮರಿಕುಂಟೆ ಕುಮಾರ್(49) ಎಂಬುವವನ ವಿರುದ್ದ ಪ್ರಕರಣ ದಾಖಲಿಸಿದ್ದಾರೆ. ಪರಶುರಾಮಪುರದಿಂದ ಚಳ್ಳಕೆರೆ ಕಡೆಗೆ ಚಾಲಕ ಕುಮಾರ್ ಅತಿವೇಗವಾಗಿ ಚಾಲನೆ ಮಾಡಿಕೊಂಡು ಬಂದು ಆಟೋರಿಕ್ಷಾಕ್ಕೆ ಡಿಕ್ಕಿಪಡಿಸಿದ್ದಾನೆ. ಆಟೋದಲ್ಲಿ ಸುಮಾ, ರಂಗಮ್ಮ, ಮಂಜುನಾಥ, ಸ್ವಾಮಿ, ಕುಮಾರ್, ರಮೇಶ್ ಗಾಯಗೊಂಡು ಚಿಕಿತ್ಸೆ ಪಡೆಯುತ್ತಿದ್ದ ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿದ್ದಾರೆ.

# ಸರ್ಕಾರದ 02 ವರ್ಷಗಳ ಸಾಧನೆ ಹಾಗೂ ಯೋಜನೆಗಳ ಕುರಿತು ವಸ್ತುಪ್ರದರ್ಶನಕ್ಕೆ ಸಚಿವ ಡಿ. ಸುಧಾಕರ್ ಚಾಲನೆ

» ಚಿತ್ರದುರ್ಗ

ರಾಜ್ಯ ಸರ್ಕಾರದ ಎರಡು ವರ್ಷಗಳ ಅಭಿವೃದ್ಧಿ ಸಾಧನೆ ಹಾಗೂ ಪಂಚ ಗ್ಯಾರಂಟಿ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನಕ್ಕೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಚಾಲನೆ ನೀಡಿದರು.




ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ "ಕರ್ನಾಟಕ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಹಾಗೂ ಸರ್ಕಾರದ ವಿವಿಧ ಯೋಜನೆಗಳ ಕುರಿತ ಮಾಹಿತಿಯುಳ್ಳ ವಸ್ತು ಪ್ರದರ್ಶನಕ್ಕೆ ಚಾಲನೆ ನೀಡಿ, ಸರ್ಕಾರದ ಸಾಧನೆ ಫಲಕಗಳನ್ನು ವೀಕ್ಷಿಸಿದರು.

ವಸ್ತು ಪ್ರದರ್ಶನ ಮಳಿಗೆಯಲ್ಲಿ ಅಳವಡಿಸಲಾದ ಗ್ಯಾರಂಟಿ ಸಮರ್ಪಣೆ ಅಭಿವೃದ್ಧಿಯ ಸಂಕಲ್ಪ, ನಾಡಿನ ಏಳು ಕೋಟಿ ಜನರ ಬೆಳಕು ಗ್ಯಾರಂಟಿ ಬದುಕು ಫಲಕ, ಸರ್ಕಾರದ ಯೋಜನೆಗಳಾದ ಮಹಿಳೆಯರಿಗೆ ರಾಜ್ಯಾದ್ಯಂತ ಉಚಿತ ಪ್ರಯಾಣಿಸಲು "ಶಕ್ತಿ ಯೋಜನೆ, ಬಡ, ಹಿಂದುಳಿದ ಸೇರಿದಂತೆ ಎಲ್ಲ ಮಹಿಳೆಯರು ಸ್ವಾವಲಂಬಿ ಬದುಕು ನಡೆಸಲು ಎಲ್ಲ ಮನೆಯ ಯಜಮಾನಿಯರಿಗೆ ಪ್ರತಿ ತಿಂಗಳು ರೂ.200 ಹಣ ನೀಡುವ ಗೃಹಲಕ್ಷ್ಮಿ ಯೋಜನೆ, ಹಸಿವು ಮುಕ್ತ ಕರ್ನಾಟಕದತ್ತ ದಾಪುಗಾಲಿಡುತ್ತಿರುವ ಅನ್ನಭಾಗ್ಯ, ಪದವಿ, ಡಿಪ್ಲೊಮಾ ಪೂರ್ಣಗೊಳಿಸಿದ ಯುವ ಜನತೆಗೆ ಉದ್ಯೋಗ ಪಡೆಯಲು ಅನುಕೂಲವಾಗಲು ಪ್ರತಿ ತಿಂಗಳು ಪದವೀಧರರಿಗೆ ರೂ.3000 ಹಾಗೂ ಡಿಪ್ಲೊಮೊ ಪದವಿದರರಿಗೆ ರೂ.1500 ನೀಡುವ ಯುವನಿಧಿ, ಪ್ರತಿ ಮನೆಗೆ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆಗಳು ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಜಾರಿಗೊಂಡಿದ್ದು, ಜನಸಾಮಾನ್ಯರ ಬದುಕಿಗೆ ಆಸರೆಯಾಗಿರುವ ಪಂಚ ಗ್ಯಾರಂಟಿ ಯೋಜನೆಗಳು ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳನ್ನೊಳಗೊಂಡ ಸಮಗ್ರ ಮಾಹಿತಿಯುಳ್ಳ ಫಲಕಗಳನ್ನು ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಗಣ್ಯರು ವೀಕ್ಷಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಭಾವಚಿತ್ರಗಳನ್ನು ಒಳಗೊಂಡ ಸೆಲ್ಫಿ ಪಾಯಿಂಟ್‌ಗಳನ್ನು ವೀಕ್ಷಿಸಿ ಪ್ರಶಂಸಿದ ಜಿಲ್ಲಾ ಉಸ್ತುವಾರಿ ಸಚಿವರು, ಈ ಸೆಲ್ಫಿ ಪಾಯಿಂಟ್‌ಗಳಲ್ಲಿ ಚಳ್ಳಕೆರೆ ಶಾಸಕರಾದ ರಘುಮೂರ್ತಿ ಅವರೊಂದಿಗೆ ನಿಂತು ಫೋಟೋ ಕ್ಲಿಕ್ಕಿಸಿಕೊಂಡರು. ಕಾರ್ಯಕ್ರಮಕ್ಕೆ ಆಗಮಿಸಿದ್ದ ವಿವಿಧ ಗಣ್ಯರು ಕೂಡ ಸೆಲ್ಫಿಪಾಯಿಂಟ್‌ನಲ್ಲಿ ನಿಂತು ಫೋಟೊ ತೆಗೆಯಿಸಿಕೊಂಡು ಸಂತಸ ವ್ಯಕ್ತಪಡಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಹಾಗೂ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನವನ್ನು ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಆಯೋಜಿಸಲಾಗಿದ್ದು, ಜೂನ್ 28 ರಿಂದ 30 ರವರೆಗೆ ವಸ್ತುಪ್ರದರ್ಶನವು ಸಾರ್ವಜನಿಕರ ವೀಕ್ಷಣೆಗೆ ಲಭ್ಯವಿರುತ್ತದೆ. ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳ ಲಾಭ ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ದೊರಕಿಸುವ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆಗಳು ಒಳಗೊಂಡಂತೆ ಸರ್ಕಾರದ ಜನಪರ ಯೋಜನೆಗಳ, ಅಭಿವೃದ್ಧಿ ಸಾಧನೆಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿಲು ವಸ್ತು ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಮಾಹಿತಿ ನೀಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಏರ್ಪಡಿಸಲಾಗಿರುವ ರಾಜ್ಯ ಸರ್ಕಾರದ ಎರಡು ವರ್ಷದ ಸಾಧನೆ ಹಾಗೂ ಪಂಚ ಗ್ಯಾರಂಟಿ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನ ಎಲ್ಲರ ಗಮನ ಸೆಳೆಯುತ್ತಿದೆ. ಈ ವಸ್ತು ಪ್ರದರ್ಶನದಲ್ಲಿ ನಾಡಿನ ಜನರ ಬದುಕು ಬೆಳಗಿಸಿದ ಗ್ಯಾರಂಟಿ ಯೋಜನೆಗಳ ಸಮಗ್ರ ಮಾಹಿತಿ, ಯಶೋಗಾಥೆಗಳನ್ನೊಳಗೊಂಡ ಪುಸ್ತಕವನ್ನು ರಾಜ್ಯದ ಮುಖ್ಯಮಂತ್ರಿಗಳಿಂದ ಪಡೆಯುವಂತೆ ಬಿಂಬಿಸುವ ಸೆಲ್ಫಿ ತೆಗೆದುಕೊಂಡು ಸಾರ್ವಜನಿಕರು ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಉಪಾಧ್ಯಕ್ಷ ಡಿ.ಎನ್. ಮೈಲಾರಪ್ಪ, ತಾಲ್ಲೂಕು ಅಧ್ಯಕ್ಷ ಪ್ರಕಾಶ್, ಜಿಲ್ಲಾ ವಾರ್ತಾಧಿಕಾರಿ ತುಕಾರಾಂರಾವ್ ಬಿ.ವಿ., ಕೆಎಸ್‌ಆರ್‌ಟಿಸಿ ಚಿತ್ರದುರ್ಗ ವಿಭಾಗೀಯ ನಿಯಂತ್ರಣಾಧಿಕಾರಿ ವೆಂಕಟೇಶ್, ಡಿವೈಎಸ್‌ಪಿ ದಿನಕರ್, ಸೇರಿದಂತೆ ಗ್ಯಾರಂಟಿ ಯೋಜನಾ ಪ್ರಾಧಿಕಾರದ ಸದಸ್ಯರು ಮತ್ತಿತರರು ಇದ್ದರು.

# ಬಾಲ್ಯವಿವಾಹನ ತಡೆಯುವ ನಿಟ್ಟಿನಲ್ಲಿ ನ್ಯಾಯಾಂಗ, ಪೊಲೀಸ್ ಇಲಾಖೆಗೆ ಎಲ್ಲರ ಸಹಕಾರ ಅಗತ್ಯ

» ಚಳ್ಳಕೆರೆ

ಸಮಾಜಕ್ಕೆ ಕೆಟ್ಟಸಂದೇಶವನ್ನು ನೀಡುವ ಏನೂ ಅರಿಯದ ಬಾಲಕಿಯರಿಗೆ ನೋವನ್ನು ಕೊಡುವ, ಸಮಾಜಕ್ಕೆ ಮಾರಕವಾದ ಬಾಲ್ಯವಿವಾಹ ಪದ್ಧತಿಯನ್ನು ಸಮಾಜದಿಂದ ತೊಡೆದುಹಾಕುವ ನಿಟ್ಟಿನಲ್ಲಿ ನ್ಯಾಯಾಂಗ ಇಲಾಖೆ ಅನೇಕ ಜಾಗೃತಿ ಕಾರ್ಯಕ್ರಮ ಹಾಗೂ ಪ್ರಬಂಧ ಸ್ಪರ್ಧೆ ಮೂಲಕ ಬಾಲಕಿಯರಲ್ಲಿ ಜಾಗೃತಿ ಮೂಡಿಸುತ್ತಿದೆ. ಅಪ್ರಾಪ್ತ ಬಾಲಕಿಯರು ಬಾಲ್ಯವಿವಾಹದಂತಹ ಅನಿಷ್ಠ ಪದ್ದತಿ ನಿರ್ಮೂಲನೆಗೆ ಸಂಕಲ್ಪ ಮಾಡಬೇಕೆಂದು ಜೆಎಂಎಫ್‌ಸಿ ನ್ಯಾಯಾಧೀಶೆ ಎಚ್.ಆರ್.ಹೇಮಾ ತಿಳಿಸಿದರು.



ಅವರು, ಶನಿವಾರ ನಗರದ ಎಚ್‌ಟಿಟಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಬಾಲ್ಯವಿವಾಹ ತಡೆ ಕುರಿತು ಹಮ್ಮಿಕೊಂಡಿದ್ದ ಪ್ರಬಂಧ ಸ್ಪರ್ಧೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಬಾಲ್ಯವಿವಾಹವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳು ಹಾಗೂ ಇದನ್ನು ಯಶಸ್ವಿಯಾಗಿ ನಡೆಯಲು ಅಪ್ರಾಪ್ತ ಬಾಲಕಿಯರು ಯಾವರೀತಿ ಸ್ಪಂದಿಸಬೇಕು ಎಂಬ ಬಗ್ಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಿದೆ. ಕೆಲವು ಸಂದರ್ಭಗಳಲ್ಲಿ ಅಪ್ರಾಪ್ತಬಾಲಕಿಯರಿಗೆ ಆಮೀಷ, ಬೆದರಿಕೆ, ಆಸೆಗಳ ಆಮೀಷವೊಡ್ಡಿ ಅವರನ್ನು ಬಾಲ್ಯವಿವಾಹದ ಬಲೆಗೆ ಕೆಡವಲಾಗುತ್ತದೆ. ಇಂತಹ ಸಂದರ್ಭದಲ್ಲಿ ಪೋಷಕರು ಬಾಲ್ಯವಿವಾಹಕ್ಕೆ ಸಹಕರಿಸಿದ ಎಲ್ಲರ ಮೇಲೂ ಪ್ರಕರಣದಾಖಲಿಸಿ ಜೈಲಿಗೆ ಕಳಿಸುವ ಕ್ರಮವನ್ನು ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಇದೇ ಸಂದರ್ಭದಲ್ಲಿ ಪ್ರೌಢಶಾಲೆಯ ಪ್ರಯೋಗಶಾಲೆ, ಆಟದ ಮೈದಾನ, ಶೌಚಾಲಯ, ಶುದ್ಧಕುಡಿಯುವ ನೀರಿನ ಘಟಕ, ಅಡುಗೆಕೋಣೆ ಸೇರಿದಂತೆ ವಿವಿಧ ಭಾಗಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪ್ರತಿನಿತ್ಯ ಕುಡಿಯುವ ನೀರು ಸರಬರಾಜಿನ ಬಗ್ಗೆ ಮಾಹಿತಿ ಪಡೆದರು. ಶೌಚಾಲಯವನ್ನು ಇನ್ನೂ ಸ್ವಚ್ಛವಾಗಿಡುವಂತೆ ಸೂಚನೆ ನೀಡಿದರು. ಶಾಲಾ ಆವರಣದಲ್ಲಿ ಪಡಿತರ ವಿತರಣೆಯ ನ್ಯಾಯಬೆಲೆ ಅಂಗಡಿ ಶಾಲೆಗೆ ರಜೆ ಇದ್ದ ಸಂದರ್ಭದಲ್ಲಿ ಪಡಿತರವಿತರಿಸುವಂತೆ ಸೂಚಿಸಬೇಕೆಂದರು. ಪಡಿತರ ಪಡೆಯಲು ಶಾಲಾ ಕಾಂಪೌಂಡ್ ಒಳಗೆ ವಾಹನ ಪ್ರವೇಶಿಸದಂತೆ ಮುಖ್ಯೋಪಾಧ್ಯಾಯರಿಗೆ ತಿಳಿಸಿದರು.

ಅಪರ ಸಿವಿಲ್ ನ್ಯಾಯಾಧೀಶ ಜಿ.ಆರ್.ಪುನಿತ್‌ಮಾತನಾಡಿ, ಬಾಲ್ಯವಿವಾಹ ಪದ್ದತಿ ಇತ್ತೀಚಿನ ದಿನಗಳಲ್ಲಿ ಅಪ್ರಾಪ್ತ ಬಾಲಕಿಯವರ ಬದುಕನ್ನು ನರಕವನ್ನಾಗಿಸುತ್ತಿದೆ. ಕಾನೂನು ಸುವ್ಯವಸ್ಥೆ ಅಪ್ರಾಪ್ತಬಾಲಕಿಯರ ಪರವಾಗಿದ್ದರೂ ಸಹ ಸೂಕ್ತ ಸಂದರ್ಭದಲ್ಲಿ ಮಾಹಿತಿ ನೀಡದೆ ಇಂತಹ ಘಟನೆಗಳು ಮರುಕಳಿಸುತ್ತಿವೆ. ಇದರ ನಿರ್ಮೂಲನೆಗೆ ನ್ಯಾಯಾಂಗ ಮತ್ತು ಪೊಲೀಸ್ ಇಲಾಖೆ ಎಲ್ಲರ ಸಹಕಾರ ಅಗತ್ಯವೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಬಾಲ್ಯವಿವಾಹತಡೆಕುರಿತು ಕಾನೂನಿನಿಂದ ಆಗುವ ಶಿಕ್ಷೆಯ ಬಗ್ಗೆ ಈಗಾಗಲೇ ಜಾಗೃತಿ ಮೂಡಿಸುವ ಕಾರ್ಯವನ್ನು ತಾಲ್ಲೂಕಿನಾದ್ಯಂತ ಎಲ್ಲಾ ಪ್ರೌಢಶಾಲೆಗಳಲ್ಲಿ ಮಾಹಿತಿ ನೀಡುವ ಮೂಲಕ ಮಾರ್ಗದರ್ಶನ ಮಾಡಲಾಗಿದೆ. ಗ್ರಾಮೀಣ ಭಾಗಗಳಲ್ಲಿ ನಡೆಯುವ ಇಂತಹ ಪ್ರಕರಣಗಳ ಬಗ್ಗೆ ಗಮನಹರಿಸಲು ಸಂಬಂಧಪಟ್ಟ ಶಿಕ್ಷಕರಿಗೆ ಮೌಖಿಕ ಸೂಚನೆ ನೀಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯಾಯ ಎ.ವೀರಣ್ಣ, ಸಹಶಿಕ್ಷಕರಾದ ಬಿ.ರಾಜ್‌ಕುಮಾರ್, ಎಸ್.ಉಮಾ, ಸುಜಾತ, ವೇಣಿ, ಪೂರ್ಣಿಮಾ, ಕುಸುಮ, ಪ್ರಾಣೇಶ್, ಪ್ರದೀಪ್, ಹಿರೇಮಠ್ ಮುಂತಾದವರು ಉಪಸ್ಥಿತರಿದ್ದರು.

## ವಿಎಸ್‌ಕೆ ಫೌಂಡೇಶನ್‌ವತಿಯಿಂದ ಕಲಿಕೋಪಕರಣಗಳ ವಿತರಣೆ



» ಪರಶುರಾಂಪುರ

ಹೋಬಳಿ ವ್ಯಾಪ್ತಿಯ ಸಿದ್ದೇಶ್ವರನದುರ್ಗ ಗ್ರಾಮದಲ್ಲಿ ವಿ.ಎಸ್.ಕೆ ಫೌಂಡೇಶನ್ ವತಿಯಿಂದ ಇತ್ತೀಚೆಗೆ ಸರ್ಕಾರಿ ಪ್ರೌಢಶಾಲೆ,ಹಿರಿಯ ಪ್ರಾಥಮಿಕ ಶಾಲೆ,ಕ್ಯಾದಿಗುಂಟೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಹಾಗೂ ಮರಡಿಹಟ್ಟಿ ಶಾಲೆ ಸೇರಿದಂತೆ ಒಟ್ಟು ನಾಲ್ಕು ಶಾಲೆಯ 350ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಉಚಿತವಾಗಿ ನೋಟ್ ಬುಕ್ ಪೆನ್ ಪೆನ್ಸಿಲ್ ಹಾಗೂ ಬಿಸ್ಕೆಟ್‌ಗಳನ್ನು ವಿತರಿಸಲಾಯಿತು. ಈ ವೇಳೆಯಲ್ಲಿ ಫೌಂಡೇಶನ್ ಅಧ್ಯಕ್ಷ ಸಿ.ಎನ್ ಮಂಜುನಾಥ್ ಮಾತನಾಡಿ,ಕಳೆದ 15 ವರ್ಷಗಳಿಂದಲೂ ಈ ಸುಂದರಿ ಶಾಲೆಯಲ್ಲಿ ನಮ್ಮ ಫೌಂಡೇಶನ್ ವತಿಯಿಂದ ಉಚಿತವಾಗಿ ನೋಟ್ ಬುಕ್, ಪೆನ್, ಪೆನ್ಸಿಲ್ ಒಳಗೊಂಡಂತೆ ಕಲಿಕಾಪೂರಕ ಸಾಮಗ್ರಿಗಳನ್ನು ವಿತರಿಸುತ್ತಿದ್ದು,ಪ್ರಸ್ತುತ ವರ್ಷದಲ್ಲಿ ನಮ್ಮ ಫೌಂಡೇಶನ್ ರಾಜ್ಯದಾದ್ಯಂತ 180ಕ್ಕೂ ಅಧಿಕ ಶಾಲೆಗಳಲ್ಲಿ ವಿತರಿಸುವ ಹಂತಕ್ಕೆ ಬೆಳೆದಿದೆ ಎಂದು ಹರ್ಷ ವ್ಯಕ್ತಪಡಿಸಿದರು.ಇದೇ ಸಂದರ್ಭದಲ್ಲಿ ಫೌಂಡೇಶನ್ ಕಾರ್ಯದರ್ಶಿ ಗಿರೀಶ್ ಮಾತನಾಡಿ,ನಮ್ಮ ತಂದೆಯವರು ಹಾಗೂ ನಮ್ಮ ಬಂಧು ಬಾಂಧವರು ಇರುವ ಊರಿನ ಶಾಲೆಯ ವಿದ್ಯಾರ್ಥಿಗಳಿಗೆ ಯಾವುದಾದರೂ ರೂಪದಲ್ಲಿ ಸಹಾಯ ಮಾಡಬೇಕೆಂದು ಪ್ರತಿ ವರ್ಷ ಇಲ್ಲಿಗೆ ಭೇಟಿಕೊಟ್ಟು ಕಲಿಕಾ ಪೂರಕ ಸಾಮಗ್ರಿಗಳನ್ನು ವಿತರಿಸುತ್ತೇವೆ. ಇದೇ ರೀತಿ ರಾಜ್ಯದ ಸುಮಾರು 180 ಶಾಲೆಗೆ ಈ ಕಲಿಕಾ ಪೂರಕ ಸಾಮಗ್ರಿಗಳನ್ನು ನಮ್ಮ ಫೌಂಡೇಶನ್ ವಿತರಿಸುತ್ತಿದ್ದು ಇಷ್ಟೆಲ್ಲ ಶಾಲೆಗಳಿಗೆ ಭೇಟಿಕೊಡಲು ಕನಿಷ್ಠ ಎರಡು ತಿಂಗಳ ಸಮಯ ತೆಗೆದುಕೊಳ್ಳುತ್ತದೆ. ನಾವು ವಿದ್ಯಾರ್ಥಿಗಳಿಂದ ಬಯಸುವುದು ಉತ್ತಮವಾದ ಓದನ್ನು ಹಾಗೂ ಸಮಾಜದಲ್ಲಿ ಒಳ್ಳೆಯ ವ್ಯಕ್ತಿಯಾಗಿ ಬೆಳೆಯುವುದನ್ನು ಮಾತ್ರವೇ ಎಂದರು. ವೇದಿಕೆಯಲ್ಲಿ ಉಪಾಧ್ಯಕ್ಷ ರಾಮ್ ಗೋಪಾಲ್,ಖಜಾಂಚಿ ಸಿಎನ್ ಶಶಿಧರ ಮತ್ತು ಫೌಂಡೇಶನ್ ಪದಾಧಿಕಾರಿಗಳು,ಶಾಲಾಭಿವೃದ್ಧಿ ಸಮಿತಿಯವರು ಹಾಗೂ ವಿವಿಧ ಶಾಲೆಗಳ ಮುಖ್ಯ ಶಿಕ್ಷಕರು ಸೇರಿದಂತೆ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಊರಿನ ಪ್ರಮುಖರು ಈ ಸಂದರ್ಭದಲ್ಲಿ ಹಾಜರಿದ್ದರು.

## ಪ್ರಮುಖ ಸುದ್ದಿ

# ಒಂದು ಕೋಟಿ ರೂ.ವೆಚ್ಚದಲ್ಲಿ ಚೆಕ್‌ಡ್ಯಾಂ ನಿರ್ಮಾಣ

» ಹೊಳಲ್ಕೆರೆ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವಿದೆಯೆಂದು ಕೈಕಟ್ಟಿ ಸುಮ್ಮನೆ ಕೂತಿಲ್ಲ. ಹೋರಾಟ ಮಾಡಿ ಹಣ ತಂದು ಕ್ಷೇತ್ರದ ಅಭಿವೃದ್ದಿಗೆ ಹಗಲು-ರಾತ್ರಿ ಪ್ರಾಮಾಣಿಕವಾಗಿ ದುಡಿಯುತ್ತಿದ್ದೇನೆಂದು ಶಾಸಕ ಡಾ.ಎಂ. ಚಂದ್ರಪ್ಪ ತಿಳಿಸಿದರು.



ಗೂಳಿಹೊಸಹಳ್ಳಿ ಗ್ರಾಮದಲ್ಲಿ ಒಂದು ಕೋಟಿ ರೂ.ವೆಚ್ಚದಲ್ಲಿ ನೂತನ ಚೆಕ್‌ಡ್ಯಾಂ ನಿರ್ಮಾಣ ಕಾಮಗಾರಿಗೆ ಭಾನುವಾರ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು.

ತಾಲ್ಲೂಕಿನಾದ್ಯಂತ ಹದಿನೇಳು ಕಡೆ ವಿದ್ಯುತ್ ಪವರ್ ಸ್ಟೇಷನ್ ಕಟ್ಟಿಸಿದ್ದೇನೆ. ಇಷ್ಟು ಸಾಲದೆಂಬಂತೆ ಚಿಕ್ಕಜಾಜೂರಿನ ಕೋಟೆಹಾಳ್ ಬಳಿ ಐದುನೂರು ಕೋಟಿ ರೂ.ವೆಚ್ಚದಲ್ಲಿ ವಿದ್ಯುತ್ ಪವರ್ ಸ್ಟೇಷನ್ ಕಟ್ಟಿಸುತ್ತಿದ್ದೇನೆ. ಜೋಗ್‌ಫಾಲ್ಸ್‌ನಿಂದ ನೇರವಾಗಿ ಇಲ್ಲಿಗೆ ವಿದ್ಯುತ್ ಪೂರೈಕೆಯಾಗಲಿದೆ. ಇದರಿಂದ ಇನ್ನು ಐವತ್ತು ವರ್ಷಗಳ ಕಾಲ ರೈತರಿಗೆ ವಿದ್ಯುತ್ ಸಮಸ್ಯೆಯಿರುವುದಿಲ್ಲ ಎಂದರು.

ಹಿರಿಯೂರಿನ ವಾಣಿವಿಲಾಸ ಸಾಗರದಿಂದ ನೀರು ತಂದು ಪ್ರತಿ ಮನೆ ಮನೆಗೆ ಶುದ್ದ ಕುಡಿಯುವ ನೀರು ಪೂರೈಸುವುದಕ್ಕಾಗಿ 367 ಕೋಟಿ ರೂ. ಗಳನ್ನು ಖರ್ಚು ಮಾಡಿದ್ದೇನೆ. ನೀರಿನ ಮಧ್ಯೆ 40 ಅಡಿ ಆಳದಲ್ಲಿ ಪಿಲ್ಲರ್ ಎತ್ತಿ ಸ್ಟೇಜ್ ಕಟ್ಟಿ ಮೋಟಾರ್ ಕೂರಿಸಿ ಫಿಲ್ಟರ್ ಅಳವಡಿಸಲಾಗಿದೆ. ಪೈಪ್‌ಲೈನ್ ಅಳವಡಿಕೆ ಕಾರ್ಯ ಮುಗಿದಿದೆ. ನಾಲ್ಕು ನೂರರಿಂದ ಐದುನೂರು ಚೆಕ್‌ಡ್ಯಾಂಗಳನ್ನು ಕಟ್ಟಿಸಿದ್ದೇನೆ. ಹೊಸದಾಗಿ ಬಂದು ನಾಟಕ, ಡ್ರಾಮ ಮಾಡುವವನಲ್ಲ. ಚುನಾವಣೆ ದಿನ ಗಿಮಿಕ್ ಮಾಡುವ ರಾಜಕಾರಣಿ ನಾನಲ್ಲ.

493 ಹಳ್ಳಿಗಳಲ್ಲಿ ಜನ ಯಾರು ಕಷ್ಟ ಪಡಬಾರದೆಂದು ಕ್ಷೇತ್ರದ ಸರ್ವಾಂಗೀಣ ಅಭಿವೃದ್ದಿಗೆ ಶ್ರಮಿಸುತ್ತ ಮನುಷ್ಯತ್ವವಿಟ್ಟುಕೊಂಡು ಕೆಲಸ ಮಾಡುತ್ತಿದ್ದೇನೆ ಎಂದು ಹೇಳಿದರು.

ಹತ್ತು ಕೋಟಿ ರೂ.ವೆಚ್ಚದಲ್ಲಿ ಸ್ಟೇಡಿಯಂ, ಎರಡು ಕೋಟಿ ರೂ. ವೆಚ್ಚದಲ್ಲಿ ಈಜುಕೊಳ, ಹನ್ನೆರಡು ಕೋಟಿ ರೂ.ನಲ್ಲಿ ಹೈಟೆಕ್ ಆಸ್ಪತ್ರೆ ಕಟ್ಟಿಸಿದ್ದೇನೆ. ಹೈಸ್ಕೂಲ್, ಪದವಿಪೂರ್ವ ಕಾಲೇಜು, ಡಿಗ್ರಿ ಕಾಲೇಜು, ವಸತಿ ಶಾಲೆಗಳು, ಎಲ್ಲಾ ಕಡೆ ಸಿ.ಸಿ.ರಸ್ತೆಗಳ ನಿರ್ಮಾಣವಾಗಿದೆ. ಸರ್ಕಾರಿ ಶಾಲೆಗೆ ಬರುವ ಬಡ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಬಾರದೆಂದು ಉಚಿತ ಬಸ್‌ಗಳನ್ನು ಬಿಟ್ಟು ಡ್ರೈವರ್, ಕಂಡಕ್ಟರ್‌ಗೆ ಸಂಬಳ ಕೊಡುತ್ತಿದ್ದೇನೆ. ರಾಜ್ಯದಲ್ಲಿ ಯಾವ ಶಾಸಕನು ಇಂತಹ ಕೆಲಸ ಮಾಡಿಲ್ಲ. ಚುನಾವಣೆಯಲ್ಲಿ ಮತ ಹಾಕುವುದು ಒಂದು ನಿಮಿಷದ ಕೆಲಸ. ಯಾರು ನಿಮ್ಮ ಪರವಾಗಿ ಕೆಲಸ ಮಾಡುತ್ತಾರೆನ್ನುವುದನ್ನು ಆಲೋಚಿಸಿ ಮತ ನೀಡಿ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಜನತೆಯಲ್ಲಿ ಮನವಿ ಮಾಡಿದರು.

ಚಂದ್ರಣ್ಣ,ದ್ಯಾಮಪ್ಪ,ರಾಮಜ್ಜ,ಪ್ರವೀಣ್, ಅಂಳಪ್ಪ, ಚಂದ್ರಣ್ಣ, ಸುರೇಶ್, ಈಶ್ವರಣ್ಣ, ರಾಜಣ್ಣ, ತಿಪ್ಪೇಸ್ವಾಮಿ, ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್ ನವೀನ್ ಹಾಗೂ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

**ಫಾಸ್ಟ್ ನ್ಯೂಸ್**

## ಕೆಂಪೇಗೌಡ ಜಯಂತಿ: ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ



» **ಚಳ್ಳಕೆರೆ**

ನಾಡಪ್ರಭುಕೆಂಪೇಗೌಡರ 516ನೇ ಜಯಂತಿ ಪ್ರಯುಕ್ತ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಒಟ್ಟು ನಾಲ್ಕು ಸ್ಪರ್ಧೆಗಳನ್ನು ಏರ್ಪಡಿಸಿದ್ದು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗಹಿಸಿ ಬಹುಮಾನವನ್ನು ಗಳಿಸಿದ್ದಾರೆ. ಇಂತಹ ಕಾರ್ಯಕ್ರಮಗಳ ಆಚರಣೆಯಿಂದ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹೆಚ್ಚುತ್ತದೆ ಎಂದು ಕ್ಷೇತ್ರಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ತಮ್ಮ ಕಚೇರಿ ಸಭಾಂಗಣದಲ್ಲಿ ನಾಡಪ್ರಭುಕೆಂಪೇಗೌಡರ 516ನೇ ಜಯಂತಿ ಪ್ರಯುಕ್ತ ತಾಲ್ಲೂಕು ಆಡಳಿತ ಮತ್ತು ಶಾಲಾ ಶಿಕ್ಷಣ ಮಂಡಳಿ ಹಮ್ಮಿಕೊಂಡಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು. ನಾಡಪ್ರಭುಕೆಂಪೇಗೌಡರ ವಿಶೇಷ ಕೊಡುಗೆ ಹಾಗೂ ಜನಪರ ಕಾರ್ಯಕ್ರಮಗಳ ಬಗ್ಗೆ ಭಾಷಣ, ಪ್ರಬಂಧ, ರಸಪ್ರಶ್ನೆ, ಚಿತ್ರಕಲೆ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಒಟ್ಟು 169 ವಿವಿಧ ಪ್ರೌಢಶಾಲೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಅಂತಿಮವಾಗಿ ಭಾಷಣ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವನ್ನು ಆದರ್ಶಶಾಲೆಯ ಕೆ.ಎಚ್. ವೈಷ್ಣವಿ, ದ್ವಿತೀಯ ಬಹುಮಾನವನ್ನು ಎಚ್‌ಟಿಟಿ ಶಾಲೆಯಎಂ.ಮೇಘನ,ತೃತೀಯಬಹುಮಾನವನ್ನು ವಾಸವಿವಿದ್ಯಾನಿಕೇತನದ ವಿ.ಶ್ರೀಜಾ, ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಮುಸ್ಟಲಗುಮ್ಮಿ ವೀರಭದ್ರೇಶ್ವರಪ್ರೌಢಶಾಲೆಯ ಎಸ್.ಪಿ.ರೋಹಿತ್, ದ್ವಿತೀಯ ಬಹುಮಾನವನ್ನು ಆದರ್ಶಶಾಲೆಯ ಜಿ.ಎಸ್.ಪ್ರಾಧಿನ್ಯ, ತೃತೀಯ ಬಹುಮಾನವನ್ನು ಕಲಮರಹಳ್ಳಿ ಸರ್ಕಾರಿ ಪ್ರೌಢಶಾಲೆಯ ವಿ.ಸಲ್ಮಾ, ರಸಪ್ರಶ್ನೆ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಎಚ್‌ಟಿಟಿ ಶಾಲೆ ಎಸ್.ದೀಕ್ಷಿತ, ಟಿ.ಅಶ್ವಿನಿ, ದ್ವಿತೀಯ ಬಹುಮಾನ ಆದರ್ಶ ಶಾಲೆಯ ಪಿ.ಶ್ರೀಯಾನ್ಸ್‌ರಾಜ್, ಕೆ.ಸಮರ್ಥ, ತೃತೀಯ ಬಹುಮಾನವನ್ನು ವಾಸವಿ ಆಂಗ್ಲ ಶಾಲೆಯ ಎಂ.ಡಿ.ಲಲಿತ್‌ಕಿಶನ್,ಜಿ.ವಿ.ಮಂಜುನಾಥ,ಚಿತ್ರಕಲೆ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಎಚ್‌ಟಿಟಿ ಶಾಲೆಯ ಜಿ.ನವ್ಯಶ್ರೀ, ದ್ವಿತೀಯ ಬಹುಮಾನ ವಾಸವಿ ಶಾಲೆಯ ಎಂ.ನಿಹಾರಿಕ, ತೃತೀಯ ಬಹುಮಾನ ಆದರ್ಶ ಶಾಲೆಯ ಸಿ.ಎಂ.ಶೋಭ ಪಡೆದುಕೊಂಡರು. ಕಾರ್ಯಕ್ರಮದಲ್ಲಿ ಇಸಿಒ ಮಾರುತಿಭಂಡಾರಿ, ತಿಪ್ಪೇಸ್ವಾಮಿ, ವಿಜಯ, ಗಿರಿಯಪ್ಪ ಮುಂತಾದವರು ಉಪಸ್ಥಿತರಿದ್ದರು.

## ನಗರದಲ್ಲಿಂದು: ಪುಣ್ಯ ಸ್ಮರಣೋತ್ಸವ

ಚಿತ್ರದುರ್ಗದ ಶ್ರೀ ಗಾನಯೋಗಿ ಸಂಗೀತ ಬಳಗದವತಿಯಿಂದ ಲಿಂ. ಪಂಚಾಕ್ಷರ ಗವಾಯಿಗಳ 81ನೇ ಹಾಗೂ ಲಿಂ. ಡಾ. ಪುಟ್ಟರಾಜ ಕವಿ ಗವಾಯಿಗಳ 15ನೇ ಪುಣ್ಯ ಸ್ಮರಣೋತ್ಸವ ಸಮಾರಂಭವೂ ಜೂ. 29 ರ ಭಾನುವಾರ ಬೆಳ್ಳಿಗೆ 10.30ಕ್ಕೆ, ಶ್ರೀಮತಿ ಶಾರದಮ್ಮ ರುದ್ರಪ್ಪ ಕಲ್ಯಾಣ ಮಂಟಪಕಾರ್ಯಕ್ರಮದ ಸಾನಿಧ್ಯ ದಾವಣಗೆರೆ ವಿರಕ್ತಮಠದ ಡಾ.ಬಸವಪ್ರಭು ಶ್ರೀಗಳು ಅಧ್ಯಕ್ಷತೆಯನ್ನು ಶ್ರೀ ಗಾನಯೋಗಿ ಸಂಗೀತ ಬಳಗದ ಎಂ.ತೋಟಪ್ಪ ಉತ್ತಂಗಿ ನಿವೃತ್ತ ಉಪನ್ಯಾಸಕರಾದ ಶ್ರೀಮತಿ ಸಿ.ಬಿ.ಶೈಲಾ ವಿಜಯಕುಮಾರ್ ಉಭಯ ಶ್ರೀಗಳ ಬಗ್ಗೆ ಉಪನ್ಯಾಸಕಾರ್ಯಕ್ರಮದಲ್ಲಿ ಶ್ರೀಮತಿ ಶಾರದಮ್ಮ ರುದ್ರಪ್ಪ, ಶ್ರೀಮತಿ ಉಮಾ ರಮೇಶ್, ಶ್ರೀಮತಿ ಪ್ರೇಮ ಬಾಲಚಂದ್ರಪ್ಪ, ಶ್ರೀಮತಿ ನೀಲಮ್ಮ ಬಸಯ್ಯ ಹಾಗೂ ಬ್ರಹ್ಮಚಾರಿ ಉಪಸ್ಥಿತಿ ಸಮಾಜದಲ್ಲಿ ಸಾಧನೆಯನ್ನು ಮಾಡಿದ ಹಿರಿಯ ಪತ್ರಕರ್ತರು, ಬರಹಗಾರರಾದ ಜಿ.ಎಸ್. ಉಜ್ಜನಪ್ಪ, ಜಾನಪದ ಗಾಯಕಿ ಶ್ರೀಮತಿ ಸುಶೀಲಮ್ಮ, ಪರಿಸರ ಪ್ರೇಮಿ ಸಿದ್ದರಾಜು ಜೋಗಿ, ಸಂಗೀತಗಾರರಾದ ರಾಮಲಿಂಗ ಜಲ್ಲಾಪುರ ಹಾಗೂ ರಂಗಕರ್ಮಿ ಪ್ರಕಾಶ್ ಬಾದರದಿನ್ನಿಯವರಿಗೆ ಸನ್ಮಾನವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಶ್ರೀ ಗಾನಯೋಗಿ ಸಂಗೀತ ಬಳಗದವತಿಯಿಂದ ಗೀತಾ ಗಾಯನ ಕಾರ್ಯಕ್ರಮ.

## ಪವರ್ ಲಿಫ್ಟಿಂಗ್ ಚಾಂಪಿಯನ್‌ಶಿಪ್ ವಿಜೇತರು

» **ದಾವಣಗೆರೆ**

ನಗರದ ಹೊರವಲಯದಲ್ಲಿರುವ ಎಕೆಎಸ್ ಕಲ್ಯಾಣ ಮಂಟಪದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಸೀನಿಯರ್,ಸಬ್ ಜೂನಿಯರ್ ಮತ್ತುಜೂನಿಯರ್ ಪವರ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್‌ನ ವಿವಿಧ ಸ್ಪರ್ಧೆಗಳಲ್ಲಿ ವಿಜೇತರು. ಸಬ್ ಜೂನಿಯರ್ ವಿಭಾಗದ 105 ಕೆಜಿ ತೂಕದಲ್ಲಿ ಮಧ್ಯಪ್ರದೇಶದ ಅಂಶು ಪ್ರಥಮ ಸ್ಥಾನ ಗಳಿಸಿದರೆ, ಪಂಜಾಬ್‌ನ ಗಗನ್‌ದೀಪ್ ಸಿಂಗ್ ದ್ವಿತೀಯ ಸ್ಥಾನ ಹಾಗೂ ರಾಜಸ್ಥಾನದ ಶಶಾಂಕ್ ರಂಗ್ ತೃತೀಯ ಸ್ಥಾನ ಪಡೆದಿದ್ದಾರೆ. ಸಬ್ ಜೂನಿಯರ್ 69 ಕೆಜಿ ವಿಭಾಗದಲ್ಲಿ ಹರಿಯಾಣದ ಐಸು ಲಾಕ್ರಾ ಪ್ರಥಮ ಸ್ಥಾನ ಗಳಿಸಿದರೆ, ರಾಜಸ್ಥಾನದ ಕಾಶೀಶ್ ಬಾಬ್ ದ್ವಿತೀಯ ಸ್ಥಾನ ಹಾಗೂ ರಾಜಸ್ಥಾನದ ಮಿತಾಲಿ ಜೈನ್ ತೃತೀಯ ಸ್ಥಾನ ಪಡೆದಿದ್ದಾರೆ.

# ಯೂತ್ ಕಾಂಗ್ರೆಸ್ ಜಿಲ್ಲಾ ಕಾರ್ಯಕಾರಿಣಿ



» **ಚಿತ್ರದುರ್ಗ**

ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಸ್ಪರ್ಧಿಸಿ ನೀವುಗಳು ನಾಯಕರಾಗಿ. ಸೋಲು–ಗೆಲುವಿಗಿಂತ ಚುನಾವಣೆಯಲ್ಲಿ ಸ್ಪರ್ಧಿಸುವ ಧೈರ್ಯ ಮಾಡಿ ಎಂದು ಯೂತ್ ಕಾಂಗ್ರೆಸ್ ಅಧ್ಯಕ್ಷರು, ಪದಾಧಿಕಾರಿಗಳಿಗೆ ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ರಾಜ್ಯಾಧ್ಯಕ್ಷ ಮಂಜುನಾಥ್‌ಗೌಡ ಕರೆ ನೀಡಿದರು.

ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯಿಂದ ಉಮಾಪತಿ ಕಲ್ಯಾಣ ಮಂಟಪದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಕಾರ್ಯಕಾರಿಣಿ ಸಭೆ ಉದ್ಘಾಟಿಸಿ ಮಾತನಾಡಿದರು.

ರಾಹುಲ್‌ಗಾಂಧಿ ಯುವ ಜನಾಂಗಕ್ಕೆ ಪಕ್ಷದಲ್ಲಿ ಆದ್ಯತೆ ನೀಡಿದ್ದಾರೆ. ಬ್ಲಾಕ್, ಬೂತ್ ಮಟ್ಟದಲ್ಲಿ ಯುತ್ ಕಾಂಗ್ರೆಸ್‌ನ್ನು ಸಂಘಟಿಸಿ. 2028 ರಲ್ಲಿ ನಡೆಯುವ ವಿಧಾನಸಭೆ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್ ಅಧಿಕಾರದ ಚುಕ್ಕಾಣಿ ಹಿಡಿಯಬೇಕೆಂದು ತಿಳಿಸಿದರು.

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನುಡಿದಂತೆ ನಡೆದಿದ್ದಾರೆ. ಉಚಿತ ಗ್ಯಾರೆಂಟಿಗಳಿಂದ 44 ಸಾವಿರ ಕೋಟಿ ರೂ.ಬಡವರ ಮನೆಗಳಿಗೆ ತಲುಪಿದೆ. ಜಿಲ್ಲೆಯಲ್ಲಿ ನಾಲ್ಕು ಕೋಟಿ 36 ಲಕ್ಷ ರೂ.ಗಳನ್ನು ಶಕ್ತಿ ಯೋಜನೆಗೆ ನೀಡಿದೆ. ಬಿಜೆಪಿ. ಆರ್.ಎಸ್. ಎಸ್.ನವರು ಅಂಬೇಡ್ಕರ್, ಸಂವಿಧಾನ, ಗಾಂಧಿಯನ್ನು ದೂರವಿಡುವ ಕೆಲಸ ಮಾಡುತ್ತಿರುವುದನ್ನು ಯೂತ್ ಕಾಂಗ್ರೆಸ್ ಸಹಿಸುವುದಿಲ್ಲ. ಕಾಂಗ್ರೆಸ್ ದೇಶ ಕಟ್ಟುವ ಕೆಲಸ ಮಾಡುತ್ತಿದೆ. ನಾಯಕರುಗಳಿಗೆ ಯುವ ಕಾಂಗ್ರೆಸ್ ಬುನಾದಿ ಎಂದು ಹೇಳಿದರು.

ಜಾತಿ ಧರ್ಮಗಳ ನಡುವೆ ಬೆಂಕಿ ಹಚ್ಚುವ ಕೆಲಸ ಮಾಡುತ್ತಿರುವ ಬಿಜೆಪಿ. ಸಾಮರಸ್ಯವನ್ನು ಕೆಡಿಸುತ್ತಿದೆ. ಇದರ ವಿರುದ್ದ ಯುವ ಕಾಂಗ್ರೆಸ್ ಜನತೆಯಲ್ಲಿ ಜಾಗೃತಿ ಮೂಡಿಸುವಂತೆ ಮನವಿ ಮಾಡಿದರು.

ಕರ್ನಾಟಕ ಉಸ್ತುವಾರಿ ಹಿಮಾಚಲ ಪ್ರದೇಶದ ನಿಗಮ್ ಭಂಡಾರಿ ಮಾತನಾಡಿ ರಾಹುಲ್‌ಗಾಂಧಿ ಯೂತ್‌ಗಳಿಗೆ ಅಧಿಕಾರ ನೀಡಿದ್ದಾರೆ. ಕಾಂಗ್ರೆಸ್ ಪಕ್ಷದ ವಿಚಾರ, ತತ್ವ ಸಿದ್ದಾಂತಗಳನ್ನು ಯೂತ್ ಕಾಂಗ್ರೆಸ್ ಕಾರ್ಯಕರ್ತರು ಪ್ರತಿ ಮನೆ ಮನೆಗೆ ತಲುಪಿಸಿ ಶೋಷಿತರು, ರೈತರು, ಮಹಿಳೆಯರ ಪರವಾಗಿ ನಿಲ್ಲಬೇಕು. ದೇಶದ ಪ್ರಧಾನಿ ನರೇಂದ್ರಮೋದಿ ವರ್ಷಕ್ಕೆ ಎರಡು ಕೋಟಿ ಉದ್ಯೋಗ ನೀಡುವುದಾಗಿ ಯುವ ಸಮೂಹವನ್ನು ನಂಬಿಸಿ ವಂಚಿಸಿದ್ದಾರೆ. ಕೊಟ್ಟ ಭರವಸೆ ಯಾವುದು ಈಡೇರಿಲ್ಲ. ಕಾಂಗ್ರೆಸ್ ಪಕ್ಷ ಕೊಟ್ಟ ಮಾತನ್ನು ಉಳಿಸಿಕೊಂಡು ಐದು ಉಚಿತ ಗ್ಯಾರೆಂಟಿಗಳನ್ನು ನೀಡಿದೆ. ಕೇಂದ್ರ ಬಿಜೆಪಿ. ಸರ್ಕಾರದ ತಪ್ಪು ನಿರ್ಧಾರಗಳನ್ನು ಜನರಿಗೆ ಮನವರಿಕೆ ಮಾಡಿ ಜಾಗೃತಿಗೊಳಿಸಿ ಎಂದರು.

ಯೂತ್ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕಾರೆಹಳ್ಳಿ ಉಲ್ಲಾಸ್ ಮಾತನಾಡುತ್ತ ರಾಹುಲ್‌ಗಾಂಧಿ ಪಕ್ಷದಲ್ಲಿ ಯುವಕರಿಗೆ ಪ್ರಾಧಾನ್ಯತೆ ನೀಡಿದ್ದಾರೆ. ಒಂದು ಲಕ್ಷಕ್ಕೂ ಹೆಚ್ಚು ಸದಸ್ಯರು ನೊಂದಣಿಯಾಗಿದ್ದಾರೆ. ಪ್ರತಿ ಬೂತ್‌ನಲ್ಲಿಯೂ ಯುವ ಕಾಂಗ್ರೆಸ್ ಶಾಖೆ ತೆರೆದು ಪಕ್ಷ ಸಂಘಟಿಸಿ ಮುಂಬರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲಿ ಪಕ್ಷವನ್ನು ಗೆಲ್ಲಿಸುವುದಾಗಿ ಭರವಸೆ ನೀಡಿದರು.

ಯೂತ್ ಕಾಂಗ್ರೆಸ್‌ನಲ್ಲಿ ಅಸಮಾಧಾನಗೊಂಡಿರುವವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಜಿಲ್ಲೆಯಲ್ಲಿ ಯುವ ಕಾಂಗ್ರೆಸ್ ಬಲಪಡಿಸುತ್ತೇವೆ. ನಿಗಮ ಮಂಡಳಿಗಳ ನೇಮಕದಲ್ಲಿ ಯುವ ಕಾಂಗ್ರೆಸ್‌ನ್ನು ಪರಿಗಣಿಸುವಂತೆ ರಾಜ್ಯಾಧ್ಯಕ್ಷ ಮಂಜುನಾಥ್‌ಗೌಡರವರಲ್ಲಿ ವಿನಂತಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಮಾತನಾಡಿ ಕಾಂಗ್ರೆಸ್ ಪಕ್ಷದ ಸಾಧನೆಗೆ ಬಿಜೆಪಿ.ಯಿಂದ ಚ್ಯುತಿ ಬರುತ್ತಿದೆ. ಸಂವಿಧಾನವನ್ನು ಬದಲಾಯಿಸಲು ಹೊರಟಿದ್ದಾರೆ. ರಾಹುಲ್‌ಗಾಂಧಿ ಭಾರತ್ ಜೋಡೋ ಯಾತ್ರೆಯಲ್ಲಿ ನಾಲ್ಕು ಸಾವಿರ ಕಿ.ಮೀ. ಪಾದಯಾತ್ರೆ ನಡೆಸಿ ಯುವಕರಲ್ಲಿ ಉತ್ಸಾಹ ತುಂಬಿದ್ದಾರೆ. ಉಚಿತ ಗ್ಯಾರೆಂಟಿಗಳಿಂದ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳಲ್ಲಿ ಐದರಲ್ಲಿ ಪಕ್ಷ ಗೆದ್ದಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಮಾಜಿ ಶಾಸಕ ಎ.ವಿ.ಉಮಾಪತಿ ಮಾತನಾಡುತ್ತ ರಾಜೀವ್‌ಗಾಂಧಿ ಯುವ ಕಾಂಗ್ರೆಸ್‌ನಿಂದ ಬೆಳೆದು ದೇಶದ ಪ್ರಧಾನಿಯಾದರು. ಯೂತ್ ಕಾಂಗ್ರೆಸ್ ರಾಜ್ಯಾಧ್ಯಕ್ಷ ಮಂಜುನಾಥಗೌಡ ಚುನಾವಣೆಯಲ್ಲಿ ಐದು ಸಾವಿರ ಮತಗಳ ಅಂತರದಿಂದ ಗೆದ್ದಿದ್ದಾರೆ. ಕಾಂಗ್ರೆಸ್ ದೇಶದ ಶಕ್ತಿ. ಚುನಾವಣೆಯಲ್ಲಿ ಮನೆ ಮನೆಗೆ ಹೋಗಿ ಜನರನ್ನು ಕರೆ ತಂದು ಮತ ಹಾಕಿಸುವ ಕೆಲಸ ಮಾಡುವವರು ಯುವಕರು. ಇಂದಿರಾಗಾಂಧಿ ಪಕ್ಷಕ್ಕೆ ಶಕ್ತಿ ತುಂಬಿದ್ದಾರೆ. ಐದು ಉಚಿತ ಗ್ಯಾರೆಂಟಿಗಳಿಂದ ಬಡವರು ಬದುಕು ಕಟ್ಟಿಕೊಂಡಿದ್ದಾರೆಂದು ಹೇಳಿದರು.

ವೈಶಾಖ್ ಯಾದವ್, ಸಂದೀಪ್, ಉಸ್ತುವಾರಿ ನಜ್ಮ, ಬಾಹುಬಲಿ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್. ಮೈಲಾರಪ್ಪ, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ಗ್ಯಾರೆಂಟಿ ಅನುಷ್ಠಾನಗಳ ಸಮಿತಿ ಅಧ್ಯಕ್ಷ ಆರ್.ಶಿವಣ್ಣ, ಡಾ.ದಾದಾಪೀರ್ ಸೇರಿದಂತೆ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರು, ಬೂತ್ ಅಧ್ಯಕ್ಷರುಗಳು ವೇದಿಕೆಯಲ್ಲಿದ್ದರು.

# ಡಿಸೆಂಬರ್‌ಗೆ ಕಾಂಗ್ರೆಸ್ ಅಧಿಕಾರ ಅಂತ್ಯ: ಕಾರಜೋಳ



» **ಚಳ್ಳಕೆರೆ**

ಸಾಲು, ಸಾಲು ಭ್ರಷ್ಟಾಚಾರದಲ್ಲಿ ಮುಳುಗಿರುವ ಕಾಂಗ್ರೆಸ್ ಸರ್ಕಾರ ಡಿಸೆಂಬರ್ ಅಂತ್ಯಕ್ಕೆ ಪತನಗೊಂಡು ಬಿಜೆಪಿ ಸರ್ಕಾರ ಆಡಳಿತಕ್ಕೆ ಬರಲಿದೆ ಎಂದು ಲೋಕಸಭಾ ಸದಸ್ಯ ಗೋವಿಂದ ಎಂ.ಕಾರಜೋಳ ಭವಿಷ್ಯನುಡಿದಿದ್ದಾರೆ.

ಅವರು, ಭಾನುವಾರ ನಗರದ ವಾಲ್ಮೀಕಿ ಕಲ್ಯಾಣಮಂಟಪದಲ್ಲಿಬಿಜೆಪಿ ಜಿಲ್ಲಾನೂತನ ಅಧ್ಯಕ್ಷ ಕೆ.ಟಿ.ಕುಮಾರಸ್ವಾಮಿಗೆ ಅಭಿನಂದನಾ ಸಮಾರಂಭ, ಚಳ್ಳಕೆರೆ ವಿವಿಧ ಮಂಡಲಗಳ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿಮಾತನಾಡಿದರು.ವಾಲ್ಮೀಕಿನಿಗಮದಲ್ಲಿ 187 ಕೋಟಿ, ಎಸ್ ಸಿ, ಎಸ್ ಟಿ ಜನಾಂಗದ 34 ಸಾವಿರ ಕೋಟಿ, ಬೋವಿನಿಗಮಗಳಲ್ಲಿ ಹಗರಣ, ಭ್ರಷ್ಟಾಚಾರ ನಡೆಸಿ ಬಳ್ಳಾರಿ ಚುನಾವಣೆ ಮಾಡಿದ್ದಾರೆ. ಇದರಿಂದ ಜನರು ಬೇಸತ್ತು ಕಾಂಗ್ರೆಸ್ ಪಕ್ಷವನ್ನು ತೀರಸ್ಕರಿಸಿ ಬಿಜೆಪಿ ಪಕ್ಷಕ್ಕೆ ಅಧಿಕಾರ ನೀಡುವ ಕಾಲ ದೂರವಿಲ್ಲ. ಪ್ರಧಾನಮಂತ್ರಿ ನರೇಂದ್ರಮೋದಿಯವರ ನಿರಂತರ ಪರಿಶ್ರಮದಿಂದ ದೇಶದ ಆರ್ಥಿಕ ಸ್ಥಿತಿ 14ನೇ ಸ್ಥಾನದಿಂದ 4ನೇ ಸ್ಥಾನಕ್ಕೆ ಏರಿದೆ. ಇನ್ನೂ ಕೆಲವೇ ದಿನಗಳಲ್ಲಿ 3ನೇ ಸ್ಥಾನಕ್ಕೆ ಏರಲಿದೆ.

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಸ್ವಪಕ್ಷದ ಶಾಸಕರೇಭ್ರಷ್ಟಾಚಾರದಬಗ್ಗೆಮಾತನಾಡುತ್ತಿದ್ದಾರೆ. ಒಂದೆರಡು ಗ್ಯಾರಂಟಿ ನೀಡಿ ಹಾಲು, ವಿದ್ಯುತ್, ಬಸ್, ನೊಂದಣೆ ಶುಲ್ಕ, ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುವಮೂಲಕ ಜನರ ಕೆಂಗಣ್ಣಿಗೆ ಗುರಿಯಾಗಿದೆ ಎಂದರು.

ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಮಾತನಾಡಿ, ಬಿಜೆಪಿ ಪಕ್ಷ ಅಧಿಕಾರ ಸಮಯದಲ್ಲಿ ನಮ್ಮ ಜಿಲ್ಲೆಯನ್ನು ಕಡೆಗಣಿಸುತ್ತಿದೆ. ಹೊರ ಜಿಲ್ಲೆಯನ್ನು ಜಿಲ್ಲಾ ಉಸ್ತುವಾರಿಗಳಾಗಿ ಮಾಡಿ ಸ್ಥಳೀಯ ನಾಯಕರಿಗೆ, ಕಾರ್ಯಕರ್ತರಿಗೆ ಅನ್ಯಾಯ ಮಾಡುತ್ತಿದೆ. ಮುಂಬರುವ ದಿನಗಳಲ್ಲಿ ಈ ಪದ್ದತಿ ಬದಲಾಗಬೇಕು. ಇದುವರೆಗೂ ಒಬ್ಬ ಸ್ಥಳೀಯ ಶಾಸಕ ಜಿಲ್ಲಾ ಉಸ್ತುವಾರಿ ಮಂತ್ರಿಯನ್ನಾಗಿ ಮಾಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.
0000000

ಬಿಜೆಪಿನಿರ್ಗಮನಜಿಲ್ಲಾಪ್ರಧಾನಕಾರ್ಯದರ್ಶಿ ಜೆ.ಪಿ.ಜಯಪಾಲಯ್ಯ, ಸೂರನಹಳ್ಳಿ ಶ್ರೀನಿವಾಸ್,ಮಾಜಿಅಧ್ಯಕ್ಷಎ.ಮುರುಳಿಯಾದವ್, ಡಿ.ಸೋಮಶೇಖರಮಂಡಿಮಠ ಮಾತನಾಡಿ, ಕೆ.ಟಿ.ಕುಮಾರಸ್ವಾಮಿಗೆ ಸಂಪೂರ್ಣಬೆಂಬಲ ನೀಡುವ ಭರವಸೆ ನೀಡಿದರು. ನೂತನ ಬಿಜೆಪಿ ಜಿಲ್ಲಾಧ್ಯಕ್ಷ ಕೆ.ಟಿ.ಕುಮಾರಸ್ವಾಮಿ ಮಾತನಾಡಿ, ಭಾರತೀಯ ಜನತಾಪಕ್ಷ ನನ್ನ ಮೇಲೆ ವಿಶ್ವಾಸವಿಟ್ಟು ಜಿಲ್ಲಾಧ್ಯಕ್ಷನನ್ನಾಗಿ ಜವಾಬ್ದಾರಿ ನೀಡಿದೆ. ಪಕ್ಷದ ಸಂಸದರೂ ಸೇರಿದಂತೆ ಎಲ್ಲಾ ನಾಯಕರ ಮಾರ್ಗದರ್ಶನದಿಂದ ಜಿಲ್ಲೆಯ ಆರೂ ವಿಧಾನಸಭಾಕ್ಷೇತ್ರಗಳಲ್ಲಿಬಿಜೆಪಿಗೆಲುವುಸಾಧಿಸುವ ನಿಟ್ಟಿನಲ್ಲಿ ಛಲದಿಂದ ಕಾರ್ಯನಿರ್ವಹಿಸುತ್ತೇನೆ. ಬಿಜೆಪಿ ಪಕ್ಷ ಕಳಂಕರಹಿತ ಪಕ್ಷವಾಗಿದೆ. ಎಲ್ಲಾ ಕಾರ್ಯಕರ್ತರು ಮುಖಂಡರ ಸಹಕಾರ ನನ್ನ ಮೇಲಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನೂತನ ಮಂಡಲಾಧ್ಯಕ್ಷ ಬಿ.ಎಂ.ಸುರೇಶ್ ವಹಿಸಿದ್ದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಬಿಜೆಪಿ ಜಿಲ್ಲಾ ಮೋರ್ಚಾ ಅಧ್ಯಕ್ಷ ವೆಂಕಟೇಶ್ಯಾದವ್, ಜಿಲ್ಲಾ ಯುವಮೋರ್ಚಾಅಧ್ಯಕ್ಷಕಾಲುವೇಹಳ್ಳಿಪಾಲಯ್ಯ, ಜಿಲ್ಲಾ ಎಸ್ಟಿ ಮೋರ್ಚಾ ಅಧ್ಯಕ್ಷ ಶಿವಣ್ಣ, ಜಿಲ್ಲಾ ಎಸ್ಸಿಮೋರ್ಚಾ ಅಧ್ಯಕ್ಷ ಕರೀಕೆರೆತಿಪ್ಪೇಸ್ವಾಮಿ, ಮಧುಗಿರಿ ಅಧ್ಯಕ್ಷ ಹನುಮೇಗೌಡ, ಎನ್. ರಘುಮೂರ್ತಿ, ಬಿ.ಎಸ್.ಶಿವಪುತ್ರಪ್ಪ, ಎಸ್. ಯಲ್ಲಪ್ಪ, ಸಿ.ಎಸ್.ಪ್ರಸಾಧ್, ನಗರಸಭಾ ಸದಸ್ಯರಾದ ಎಸ್.ಜಯಣ್ಣ, ಪಾಲಮ್ಮ, ವೆಂಕಟೇಶ್, ಸಾಕಮ್ಮ ಮುಂತಾದವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ಬೀದಿ ಬದಿ ವ್ಯಾಪಾರ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ



» **ದಾವಣಗೆರೆ**

ದಾವಣಗೆರೆ ನಗರ ಸೇರಿದಂತೆ ಜಿಲ್ಲೆಯ ತಾಲೂಕು ಕೇಂದ್ರಗಳಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯಿಂದ ಬೀದಿ ಬದಿಯ ಆಹಾರ ತಯಾರಿಕಾ ಮತ್ತು ಮಾರಾಟ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ ಮತ್ತು ತಪಾಸಣೆ ಕಾರ್ಯ ಕೈಗೊಳ್ಳಲಾಯಿತು. ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತರ ನಿರ್ದೇಶನದ ಮೇರೆಗೆ ಜಿಲ್ಲಾ ಅಂಕಿತಾಧಿಕಾರಿ ಡಾ.ಜೆಎಸ್.ನಾಗರಾಜ್ ಅವರ ನೇತೃತ್ವದಲ್ಲಿ 74 ಕ್ಕೂ ಅಧಿಕ ಬೀದಿ ಬದಿಯಲ್ಲಿ ಆಹಾರ ತಯಾರಿಕೆ ಮತ್ತು ಮಾರಾಟ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಮತ್ತು ತಪಾಸಣೆ ನಡೆಸಿ ಜಾಗೃತಿ ಮೂಡಿಸಲಾಗಿದೆ ಎಂದು ಡಾ.ನಾಗರಾಜ್ ತಿಳಿಸಿದ್ದಾರೆ.

ದಾವಣಗೆರೆ, ಚನ್ನಗಿರಿ, ಜಗಳೂರು, ಹರಿಹರ, ಹೊನ್ನಾಳಿ ಸೇರಿದಂತೆ ನಗರ ಸ್ಥಳಿಯ ಸಂಸ್ಥೆಗಳಲ್ಲಿ ಬೀದಿ ಬದಿಯ ವ್ಯಾಪಾರ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ ನೀಡಿ 58 ವ್ಯಾಪಾರಿಗಳಿಗೆ ಹೊಸ ನೋಂದಣಿ ವಿತರಣೆ ಮಾಡಿ, ಸ್ವಚ್ಚತೆ ಮತ್ತು ಆಹಾರದ ಗುಣಮಟ್ಟ ಕಾಪಾಡುವುದು, ನಿಷೇಧಿತ ಬಣ್ಣ ಬಳಕೆ ಮಾಡದಂತೆ, ರುಚಿ ಹೆಚ್ಚಿಸುವ ಕೃತಕ ರಾಸಾಯನಿಕ ಬಳಸದಂತೆ ಹಾಗೂ ಇಡ್ಲಿ ತಯಾರಿಕೆಯಲ್ಲಿ ಪ್ಲಾಸ್ಟಿಕ್ ಬಳಸದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಆಹಾರ ತಯಾರಿಕೆ ಸ್ಥಳ ಮತ್ತು ಪರಿಸರ ನೈರ್ಮಲ್ಯವಾಗಿರಬೇಕು, ತಯಾರಿಕೆಗೆ ಸೇವನೆಗೆ ಶುದ್ಧವಾದ ನೀರು ಬಳಸಬೇಕು, ವೈಯಕ್ತಿಕ ಶುಚಿತ್ವ ಕಾಪಾಡಿಕೊಳ್ಳಬೇಕು, ತಯಾರಿಸಿದ ಆಹಾರ ಕಲುಷಿತವಾಗದಂತೆ ನೋಡಿಕೊಳ್ಳಬೇಕು ಎಂದು ಅರಿವು ಮೂಡಿಸಿ, ಕರಪತ್ರ ವಿತರಿಸಲಾಗುತ್ತಿದೆ ಎಂದು ಜಿಲ್ಲಾ ಆಹಾರ ಸುರಕ್ಷತೆಯ ಅಂಕಿತಾಧಿಕಾರಿ ಡಾ.ಜೆ.ಎಸ್.ನಾಗರಾಜ್ ತಿಳಿಸಿದರು. ಈ ಸಂದರ್ಭದಲ್ಲಿ ಇಲಾಖೆಯ ಸಿಬ್ಬಂದಿಗಳಾದ ಹರಪನಹಳ್ಳಿ ಕೊಟ್ರೇಶಪ್ಪ, ನವೀನ್ ಕುಮಾರ್, ಕಿಫಾಯತ್ ಅಹಮದ್ ಹಾಗೂ ಗವಿರಂಗಪ್ಪ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಪಿಯು ಫಲಿತಾಂಶ ಸುಧಾರಣೆಗಾಗಿ ಕಾರ್ಯಸೂಚಿ ಬಿಡುಗಡೆ



» **ಚಿತ್ರದುರ್ಗ**

ದ್ವಿತೀಯ ಪಿಯುಸಿ ಫಲಿತಾಂಶ ಸುಧಾರಣೆಯಲ್ಲಿ ಪ್ರಾಂಶುಪಾಲರ ಮೇಲ್ವಿಚಾರಣೆ, ಉಪನ್ಯಾಸಕರ ಪರಿಣಾಮಕಾರಿ ಬೋಧನೆ, ವಿದ್ಯಾರ್ಥಿಗಳ ಕಲಿಕಾ ಆಸಕ್ತಿ, ಹಾಗೂ ಪೋಷಕರ ಪ್ರೋತ್ಸಾಹ ಪ್ರಮುಖ ಪಾತ್ರವಹಿಸುತ್ತದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ತಿಮ್ಮಯ್ಯ ತಿಳಿಸಿದರು.

ಚಳ್ಳಕೆರೆ ತಾಲ್ಲೂಕಿನ ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಮತ್ತು ಉಪನ್ಯಾಸಕರಿಗಾಗಿ ಶನಿವಾರ ಮಧ್ಯಾಹ್ನ ರೋಟರಿ ಭವನದಲ್ಲಿ ಆಯೋಜಿಸಿದ್ದ "ಫಲಿತಾಂಶ ಸುಧಾರಣಾ ಸಮಾಲೋಚನಾ ಸಭೆ" ಯನ್ನು ಉದ್ಘಾಟಿಸಿ ಮಾತಾನಾಡಿದರು.

ಕಾರ್ಯಭಾರ ಕಡಿಮೆ ಇರುವ ಉಪನ್ಯಾಸಕರನ್ನು ಖಾಲಿ ಹುದ್ದೆ ಇರುವ ಕಾಲೇಜಿಗಳಿಗೆ ನಿಯೋಜಿಸಿ ವಿದ್ಯಾರ್ಥಿಗಳ ಪಾಠಪ್ರವಚನಕ್ಕೆ ಯಾವುದೇ ತೊಂದರೆಯಾಗದಂತೆ ಶೈಕ್ಷಣಿಕ ವರ್ಷದ ಆರಂಭದಲ್ಲಿಯೇ ಕ್ರಮವಹಿಸಲಾಗಿದೆ. ನಮ್ಮ ಜಿಲ್ಲೆಯ ಪಿಯುಸಿ ಫಲಿತಾಂಶ ಹೆಚ್ಚಳಕ್ಕೆ ಇಲಾಖಾ ನಿಯಮಗಳನ್ವಯ ಹೊಸ ಕಾರ್ಯಸೂಚಿಗಳ ಪಟ್ಟಿ ತಯಾರಿಸಲಾಗಿದ್ದು ಅವುಗಳನ್ನು ಎಲ್ಲಾ ಉಪನ್ಯಾಸಕರು ಪಾಲನೆ ಮಾಡುವ ಮೂಲಕ ಫಲಿತಾಂಶ ವೃದ್ದಿಗೆ ಶ್ರಮಿಸುವಂತೆ ಕರೆ ನೀಡಿದರು.

ಚಿತ್ರದುರ್ಗ ಜಿಲ್ಲಾ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷರಾದ ಬಿ.ಆರ್. ಮಲ್ಲೇಶ್ ಮಾತನಾಡಿ ಪ್ರತಿ ಉಪನ್ಯಾಸಕರು ಇಲಾಖಾ ಆದೇಶಗಳಿಗೆ ಮಾತ್ರ ತಮ್ಮನ್ನು ಸೀಮಿತಗೊಳಿಸಿಕೊಳ್ಳದೇ ತಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿ ಇನ್ನಷ್ಟು ಪರಿಣಾಮಕಾರಿ ಬೋಧನೆಗೆ ಮುಂದಾಗಿ ರಾಜ್ಯಮಟ್ಟದ ದ್ವಿತೀಯ ಪಿಯುಸಿ ಫಲಿತಾಂಶ ಪಟ್ಟಿಯಲ್ಲಿ ಚಿತ್ರದುರ್ಗ ಜಿಲ್ಲೆ ಮೊದಲ ಹದಿನೈದು ಸ್ಥಾನಗಳಲ್ಲಿ ಕಾಣಿಸಿಕೊಳ್ಳಲು ಸೇವಾ ಬದ್ದತೆಯಿಂದ ಕೆಲಸ ನಿರ್ವಹಿಸಬೇಕಾಗಿದೆ ಎಂದರು. ಪ್ರಾಚಾರ್ಯರ ಸಂಘದ ಅಧ್ಯಕ್ಷರಾದ ಎಸ್.ದೇವೇಂದ್ರಪ್ಪ ಮಾತನಾಡಿ ಯಾವುದೇ ಉಪನ್ಯಾಸಕ ತನ್ನಲ್ಲಿರುವ ಜ್ಞಾನವನ್ನು ವಿದ್ಯಾರ್ಥಿಗಳಿಗೆ ಪ್ರಾಮಾಣಿಕವಾಗಿ ತಿಳಿಸುವ ಕಾರ್ಯದಲ್ಲಿ ತನ್ನನ್ನು ತೊಡಗಿಸಿಕೊಂಡಾಗ ಮಾತ್ರ ಉತ್ತಮ ಉಪನ್ಯಾಸಕನಾಗಲು ಸಾಧ್ಯ ಎಂದರು.

ಸಭೆಯ ಅಧ್ಯಕ್ಷತೆಯನ್ನು ತಳಕಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಕೆ.ಎನ್ ವಸಂತಕುಮಾರ್ ವಹಿಸಿದ್ದರು. ಸಭೆಯಲ್ಲಿ ನಾಯಕನಹಟ್ಟಿ ಕಾಲೇಜಿನ ಪ್ರಾಂಶುಪಾಲರಾದ ಶ್ರೀನಿವಾಸ್,ಸರೋಜಮ್ಮ,ಪುಷ್ಪಲತಾ,ದೇವರಾಜ್,ನಾಗರಾಜಪ್ಪ,ಮಂಜನಾಯ್ಕ್, ಸರ್ಕಾರಿ ನೌಕರರ ಸಂಘದ ನಿರ್ದೇಶಕರಾದ ಎಂ.ಶ್ರೀನಿವಾಸ್,ಉಪನ್ಯಾಸಕರಾದ ಅಶ್ವಥರೆಡ್ಡಿ ಸಹಿತ ವಿವಿಧ ಕಾಲೇಜುಗಳ ಪ್ರಾಂಶುಪಾಲರು ಮತ್ತು ಉಪನ್ಯಾಸಕರು ಸಭೆಯಲ್ಲಿ ಭಾಗವಹಿಸಿದ್ದರು.ಉಪನ್ಯಾಸಕಿ ಜಾನಕಮ್ಮ ಪ್ರಾರ್ಥಿಸಿದರು. ಬೇಡರೆಡ್ಡಿಹಳ್ಳಿ ಕಾಲೇಜಿನ ಪ್ರಾಂಶುಪಾಲರಾದ ಭೀಮರೆಡ್ಡಿ ಸ್ವಾಗತಿಸಿದರು, ಚಳ್ಳಕೆರೆ ಬಾಪೂಜಿ ಕಾಲೇಜಿನ ಪ್ರಾಂಶುಪಾಲರಾದ ಸಿ.ಜಗದೀಶ್ ವಂದಿಸಿದರು.ಉಪನ್ಯಾಸಕ ನಾಗರಾಜ್ ಬೆಳಗಟ್ಟ ಕಾರ್ಯಕ್ರಮವನ್ನು ನಿರ್ವಹಣೆ ಮಾಡಿದರು

## ಫಾಸ್ಟ್ ನ್ಯೂಸ್

### ಗುಡಿಸಲಿಗೆ ಬೆಂಕಿ



» **ಪರಶುರಾಂಪುರ**

ಹೋಬಳಿ ಸಮೀಪದ ಪಿಲ್ಲಹಳ್ಳಿ ಗ್ರಾಮದ ಪ್ರಗತಿಪರ ರೈತ,ಹಾಗೂ ಎಲ್ಐಸಿ ಕ್ಲಬ್ ಮೆಂಬರ್ ಚಿತ್ರಲಿಂಗಪ್ಪ ಅವರ ತೋಟದಲ್ಲಿ ಇತ್ತೀಚೆಗೆ ಸುಮಾರು ಎರಡುಲಕ್ಷ ವೆಚ್ಚದಲ್ಲಿ ನಿರ್ಮಿಸಿದ್ದ ವಾಸದ ಗುಡಿಸಲಿಗೆ ಗುರುವಾರ ಮಧ್ಯರಾತ್ರಿ ಯಾರೋ ಗಿಡಿಗೇಡಿಗಳು ಬೆಂಕಿ ಹಚ್ಚಿದ ಪರಿಣಾಮ ಗುಡಿಸಲು ಸಂಪೂರ್ಣವಾಗಿ ಸುಟ್ಟು ಹೋಗಿದೆ. ಈ ಸಂದರ್ಭದಲ್ಲಿ ಗುಡಿಸಲಿನಲ್ಲಿದ್ದ ಮೂರು ಗಾಡ್ರೇಜ್ ಬೀರ್ವ ಜತೆ ಎಲ್ಐಸಿ ಬಾಂಡ್‌ಗಳು, ಪುಸ್ತಕ, ಬೆಲೆಬಾಳುವ ವಸ್ತುಗಳು ಹಾಗೂ ಸಾಧನೆಗೆ ನೀಡಲಾಗಿದ್ದ ಪ್ರಸಸ್ತಿ ಪತ್ರಗಳು, ನೆನಪಿನ ಕಾಣಿಕೆಗಳು ಸೇರಿದಂತೆ ಇವರ ವಿದ್ಯಾಭ್ಯಾಸ ಹಾಗೂ ಜಮೀನಿನ ದಾಖಲೆ ಪತ್ರಗಳು, ಬಟ್ಟೆಬರೆ ಸಂಪೂರ್ಣ ಸುಟ್ಟಿವೆ. ಜತೆಗೆ ಫರ್ನಿಚರ್ಸ್‌ಗಳು, ಒಂದುಫ್ರಿಡ್ಜ್, ಎರಡು ಎಲ್ಇಡಿ ಟಿವಿ,ಒಂದು ಸೈಕಲ್ ಬೆಂಕಿಗೆ ಸುಟ್ಟಿದೆ. ಚಳ್ಳಕೆರೆ ಅಗ್ನಿಶಾಮಕಠಾಣೆಗೆ ದೂರವಾಣಿ ಕರೆ ಮಾಡಿದರೂ ಯಾವುದೇ ಪ್ರತಿಕ್ರಿಯೆ ಸಿಗದೇ ಇದ್ದನ್ನ ಮನಗಂಡ ಗ್ರಾಮಸ್ಥರು ಬೆಂಕಿ ನಂದಿಸುವ ಕಾರ್ಯಕ್ಕೆ ಮುಂದಾದರೂ ಬೆಂಕಿ ಹತೋಟಿಯಾಗದೆ ಇಡೀ ಗುಡಿಸಲು ಅಕ್ಕ ಪಕ್ಕದಲ್ಲಿನ ತೆಂಗು ಇನ್ನಿತರೆ ಕಾಡು ಜಾತಿಯ ಗಿಡಮರಗಳು ಸಂಪೂರ್ಣವಾಗಿ ಸುಟ್ಟು ಭಸ್ಮಗೊಂಡು ಸುಮಾರು ಹೆಂಟತ್ತು ಲಕ್ಷ ನಷ್ಟ ಸಂಭವಿಸಿದೆ. ಈ ಸಂಭಂಧ ಪರಶುರಾಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಘಟನಾ ಸ್ಥಳಕ್ಕೆ ಪಿಎಸ್ಐ ಮಾರುತಿ ಭೇಟಿನೀಡಿ ಪರೀಶೀಲನೆ ನಡೆಸಿದ್ದರೆ.

### ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ: ಚಂದ್ರಪ್ಪ



» **ಹೊಳಲ್ಕೆರೆ**

ಯಾವ ಊರಿಗೆ ಏನು ಕೆಲಸ ಮಾಡಿದರೆ ಜನರಿಗೆ ಒಳ್ಳೆಯದಾಗುತ್ತದೆನ್ನುವ ಅರಿವಿಟ್ಟುಕೊಂಡು ಕ್ಷೇತ್ರದ ಅಭಿವೃದ್ಧಿಗೆ ಹಗಲು-ರಾತ್ರಿ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು. ಮಳೆ ಬಾರದ ಕಾರಣ ತಾಳಿಕಟ್ಟೆ ಗ್ರಾಮದಲ್ಲಿ ಶನಿವಾರ ಗಂಗೆ ಪೂಜೆ ನೆರವೇರಿಸಿ ಮಾತನಾಡಿದರು.ನ್ಯಾಯ, ನೀತಿ, ಧರ್ಮ ರಾಜಕಾರಣಿಗಳಿಗಿರಬೇಕು. ಸಾರ್ವಜನಿಕರ ಬದುಕನ್ನು ಸ್ವಂತ ಬದುಕೆಂದು ತಿಳಿದು ಕೆಲಸ ಮಾಡಬೇಕು. ಎಂಟತ್ತು ಲಕ್ಷ ರೂ.ವೆಚ್ಚದಲ್ಲಿ ಬೀರಪ್ಪನಗುಡಿ ಕಟ್ಟಿಸಿದ್ದೇನೆ. ಹತ್ತು ಕೋಟಿ ರೂ.ವೆಚ್ಚದಲ್ಲಿ ರಸ್ತೆ ಮಾಡಿಸಿದ್ದೇನೆ. ಎರಡುವರೆ ಮೂರು ಕೋಟಿ ರೂ.ಗಳಲ್ಲಿ ಆಸ್ಪತ್ರೆ ಕಟ್ಟಿಸಿದ್ದೇನೆ. ಗಂಗಸಮುದ್ರದಲ್ಲಿ ಸಮಸ್ಯೆಯಿದೆ ಅದನ್ನು ಕೂಡ ಬಗೆಹರಿಸುವ ಭರವಸೆ ನೀಡಿದರು.ಡಿಸೆಂಬರ್ ಒಳಗೆ ತಾಲ್ಲೂಕಿನಾದ್ಯಂತ ಇರುವ ಎಲ್ಲಾ ಕೆರೆಗಳಿಗೆ ನೀರು ತುಂಬಿಸುವ ಆಸೆಯಿಟ್ಟುಕೊಂಡಿದ್ದೇನೆ. ರಾಮಗಿರಿ, ಎನ್.ಜಿ.ಹಳ್ಳಿ, ಮಲ್ಲಾಡಿಹಳ್ಳಿ, ತಾಳ್ಯ, ತೇಕಲವಟ್ಟಿ, ಅರಿಶಿನಘಟ್ಟ ಗ್ರಾಮಗಳಲ್ಲಿ ವಿದ್ಯುತ್ ಪವರ್ ಸ್ಟೇಷನ್ ಕಟ್ಟಿಸಿದ್ದೇನೆ. ಇಷ್ಟಕ್ಕೆ ಸುಮ್ಮನಾಗಿಲ್ಲ. ಚಿಕ್ಕಜಾಜೂರಿನ ಕೋಟೆಹಾಳ್ ಬಳಿ ಐದುನೂರು ಕೋಟಿ ರೂ.ವೆಚ್ಚದಲ್ಲಿ ವಿದ್ಯುತ್ ಪವರ್ ಸ್ಟೇಷನ್ ಕಟ್ಟಿಸುತ್ತಿದ್ದು, ಜೋಗ್‌ಫಾಲ್ಸ್‌ನಿಂದ ನೇರವಾಗಿ ಇಲ್ಲಿಗೆ ವಿದ್ಯುತ್ ಪೂರೈಕೆಯಾಗಲಿದೆ.

### ನೇರಳೆ ಮೇಳದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾವೀರ್ ಮ.ಕರೆಣ್ಣವರ್ ಅಭಿಮತ

# ವಿಶೇಷಚೇತನರಿಗೆ ಕರುಣೆ ತೋರದೆ ಹೆಚ್ಚಿನ ಅವಕಾಶ ಮತ್ತು ಸಮಾನ ಮನ್ನಣೆ ನೀಡಿ



» **ದಾವಣಗೆರೆ**

ಅಂಗವಿಕಲರ ಬಗ್ಗೆ ಕರುಣೆ ತೋರಿಸದೆ ಅವಕಾಶ ಮತ್ತು ಸಮಾನ ಮನ್ನಣೆ ನೀಡಿ ಎಲ್ಲರನ್ನು ಪ್ರೋತ್ಸಾಹಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾವೀರ ಮ. ಕರಣ್ಣವರ ಹೇಳಿದರು.

ನಗರದ ಹೊರವಲಯದಲ್ಲಿನ ಸಂಯೋಜಿತ ಪ್ರಾದೇಶಿಕ ಕೇಂದ್ರ [ದಿವ್ಯಾಂಗಜನ್]-ಅಖಿಅ ಯಲ್ಲಿ ಶನಿವಾರ ಆಯೋಜಿಸಲಾಗಿದ್ದ ಕರ್ನಾಟಕದಲ್ಲಿ ಮೊದಲ ನೇರಳೆ ಮೇಳವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು,

ಕಲೆ, ಸಂಸ್ಕೃತಿ, ಕ್ರೀಡಾ ಪ್ರತಿಭೆಗಳು ಮತ್ತು ಅಂಗವಿಕಲವ್ಯಕ್ತಿಗಳ ಉದ್ಯಮಶೀಲತೆಯಲ್ಲಿ ಅವರ ವಿಶೇಷ ಸಾಮರ್ಥ್ಯಗಳನ್ನು ಗುರುತಿಸಬೇಕು, ಪ್ರೋತ್ಸಾಹಿಸಬೇಕು. ಯಾವುದೇ ವ್ಯಕ್ತಿಗೆ ಮಾನಸಿಕ ಅಥವಾ ದೈಹಿಕ ದೌರ್ಬಲ್ಯ ಇದ್ದರೂ ಇತರ ಅಗಾಧ ಕೌಶಲ್ಯ, ಮಾನಸಿಕವಾಗಿ ಶಕ್ತಿ, ಸಾಮರ್ಥ್ಯ ಹೊಂದಿರುತ್ತಾರೆ. ಅವರ ಶಕ್ತಿ ಸಾಮರ್ಥ್ಯಗಳನ್ನು ಪ್ರಾಮಾಣಿಕವಾಗಿ ಗುರುತಿಸಿ,ಸರಿಯಾದಮನೋಭಾವದಿಂದ ನಿರ್ವಹಿಸಿದಲ್ಲಿ ಅದ್ವಿತೀಯ ಯಶಸ್ಸನ್ನು ಕಾಣುತ್ತಾರೆ. ಇಂತಹ ಅಭೂತಪೂರ್ವ ಸಾಧನೆ ಮಾಡಬೇಕೆಂದರೆ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯ ವೃದ್ಧಿಸಿಕೊಳ್ಳಬೇಕು. ಅದರಂತೆ ನಮ್ಮ ಗುರಿ ಸಹ ಉನ್ನತ ಮಟ್ಟದಲ್ಲಿರಬೇಕು. ವಿಕಲಚೇತನರು ಸಿಗುವಂತಹ ಅವಕಾಶಗಳನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಂಡು ತಮ್ಮ ಶಕ್ತಿ ಸಾಮರ್ಥ್ಯ ಇನ್ನಷ್ಟು ಬಲಪಡಿಸಿಕೊಳ್ಳಲು ಅಖಿಅ ಸಹಕಾರಿಯಾಗಿದೆ. ತುಮಕೂರು ಜಿಲ್ಲೆಯವರಾದ ಶ್ರೀ ಕೆಂಪಾ ಹೊನ್ನಯ್ಯ ಕುರುಡುತನದಿಂದ ಬಳಲುತ್ತಿದ್ದರೂ ಪಶ್ಚಿಮ ಬಂಗಾಳದಲ್ಲಿ ಐಎಎಸ್ ಅಧಿಕಾರಿಯಾಗಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದನ್ನು ಸ್ಮರಿಸಿದರು. ಆದ್ದರಿಂದ ಪ್ರತಿಯೊಬ್ಬರೂ ಅಖಿಅ ಯ ಸೌಲಭ್ಯಗಳು ಮತ್ತು ಯೋಜನೆಗಳನ್ನು ಬಳಸಿಕೊಂಡು ತಮ್ಮ ಜೀವನದಲ್ಲಿ ಸಾಧನೆ ಮಾಡಬೇಕೆಂದು ಪ್ರೋತ್ಸಾಹಿಸಿದರು.ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ಜಂಟಿ ನಿರ್ದೇಶಕ ಎಸ್. ನಟರಾಜ್ ಮಾತನಾಡಿ, ನೇರಳೆ ಬಣ್ಣವು ವಿಕಲಚೇತನರ ಘನತೆಯ ಸಂಕೇತವಾಗಿದೆ. ರಾಜ್ಯ ಸರ್ಕಾರದ ಸಿಗುವ ವಿವಿಧ ಯೋಜನೆಗಳ ಬಗ್ಗೆ ಅವರು ವಿವರಿಸಿದ ಅವರು, ಸಂಯೋಜಿತ ಪ್ರಾದೇಶಿಕ ಕೇಂದ್ರದ (ಸಿಆರ್‌ಸಿ) ಒಂದೇ ಸೂರಿನಡಿ ವಿಕಲಚೇತನರಿಗೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊದಗಿಸುವುದೇ ಇದರ ಸದುದ್ದೇಶವಾಗಿದೆ. ಈ ನೇರಳೆ ಕಾರ್ಯಕ್ರಮವು ವಿಕಲಚೇತನರನ್ನು ಗೌರವಿಸುತ್ತದೆ ಮತ್ತು ಅವರ ಸಾಮರ್ಥ್ಯಗಳನ್ನು ಬೆಳಕಿಗೆ ತರಲು ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕಿದೆ. ಮುಂದಿನ ದಿನಗಳಲ್ಲಿ ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಇದೇ ರೀತಿಯ ನೇರಳೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದಲ್ಲದೇಬೆಂಗಳೂರು ವ್ಯಾಪ್ತಿಯಲ್ಲಿ ಸಂಯೋಜಿತ ಪ್ರಾದೇಶಿಕ ಕೇಂದ್ರ ಸ್ಥಾಪಿಸಲು ಕ್ರಮವಹಿಸಲಾಗುವುದು ಎಂದರು. ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಎಂ.ಎಸ್. ಕೌಲಾಪುರೆ, ಅಂಗವಿಕಲ ವ್ಯಕ್ತಿಗಳಿಗೆ ಸಾಮರ್ಥ್ಯವಿದೆ ಆದರೆ ಅವಕಾಶಗಳಿಂದ ವಂಚಿತರಾಗಿ ಅತಂತ್ರ ಪರಿಸ್ಥಿತಿಯಲ್ಲಿ ಬದುಕುತ್ತಿದ್ದಾರೆ. ಪ್ರಸ್ತುತ ಇಂದಿಗೂ ಕೆಲವು ಅಂಗವಿಕಲರು ತಮ್ಮ ಅಂಗವೈಕಲ್ಯತೆಯನ್ನು ಮರೆಮಾಚಿ ಜೀವನ ನಡೆಸುತ್ತಿದ್ದಾರೆ. ಅಂತಹವರನ್ನು ಗುರುತಿಸಿ ಸಮಾಜದ ಮುಖ್ಯವಾಹಿನಿಗೆ ಬರಲು ಪ್ರೋತ್ಸಾಹಿಸಬೇಕು. ಯಾವುದೇ ಒಬ್ಬ ವ್ಯಕ್ತಿ ಅಂಗವೈಕ್ಯತೆ ಹೊಂದಿದ್ದರೆ, ಮತ್ತೊಂದು ರೀತಿಯ ವಿಶೇಷ ಶಕ್ತಿ ಸಾಮರ್ಥ್ಯಗಳನ್ನು ಒಳಗೊಂಡಿರುತ್ತಾರೆ. ಉದಾಹರಣೆಗೆ ಪಂಡಿತ್ ಪುಟ್ಟರಾಜ ಗವಾಯಿ ಎಂದು ಸ್ಮರಿಸಿದರು. ಅದೇ ರೀತಿ ಎಲ್ಲಾ ಅಂಗವಿಕಲರು ಸಹ ಸಮಾಜದಲ್ಲಿ ಗೌರವಯುತ ಜೀವನವನ್ನು ನಡೆಸಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ಸಿಆರ್‌ಸಿ ನಿರ್ದೇಶಕಿ ಮಿನಾಕ್ಷಿ ಸ್ವಾಗತಿಸಿ, ಪ್ರಾಸ್ತವಿಕವಾಗಿ ಮಾತನಾಡಿದರು. ಬೆಂಗಳೂರು ನಗರ ಜಿಲ್ಲೆಯ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಂಗವಿಕಲರ ಕಲ್ಯಾಣಾಧಿಕಾರಿ ಕೃಷ್ಣಮೂರ್ತಿ, ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಲ್ಯಾಣಾಧಿಕಾರಿ ಡಾ.ಕೆ.ಕೆ.ಪ್ರಕಾಶ್, ಎಸ್.ಎಸ್. ಆಸ್ಪತ್ರೆಯ ನರವಿಜ್ಞಾನಿ ಡಾ.ರಚಿತಾ ಹಾಗೂ ವಿಶೇಷಚೇತನ ಫಲಾನುಭವಿಗಳು, ಎನ್‌ಜಿಒಗಳು, ಪೋಷಕರು, ವಿವಿಧ ವಿಶೇಷ ಶಾಲೆಯ ಮಕ್ಕಳು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

**ಉಚಿತ ಸಹಾಯಕ ಸಾಧನಗಳ ವಿತರಣೆ:** ಕಾರ್ಯಕ್ರಮಕ್ಕೆ ಒಂದು ಸಾವಿರಕ್ಕೂ ಅಧಿಕ ಜನರು ಪಾಲ್ಗೊಂಡಿದ್ದು, 85 ಫಲಾನುಭವಿಗಳಿಗೆ [36 ಅಂಗವಿಕಲರು ಮತ್ತು 49 ಹಿರಿಯ ನಾಗರಿಕರು] ಅಖಿಅ-ಕಒಆಏ ಯಿಂದ ಉಚಿತ ಸಹಾಯಕ ಸಾಧನಗಳನ್ನು ವಿತರಿಸಲಾಯಿತು. ಇದೇ ವೇಳೆ ಕಾರ್ಯಕ್ರಮದ ಅಂಗವಾಗಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಅನೇಕ ಸರ್ಕಾರಿ ಮತ್ತು ಸರ್ಕಾರೇತರ ಸಂಸ್ಥೆಗಳಿಂದ ಸ್ಥಾಪಿಸಲಾದ ಅಂಗವಿಕಲರ ಪುನರ್ವಸತಿಗಾಗಿ ಬಳಸುವ ಸುಧಾರಿತ ತಂತ್ರಜ್ಞಾನ ಮತ್ತು ಉತ್ಪನ್ನಗಳನ್ನು ಪ್ರದರ್ಶಿಸಿದರು. ವಿಕಲಚೇತನರ ಸೃಜನಶೀಲ ಕೌಶಲ್ಯಗಳನ್ನು ಪ್ರದರ್ಶಿಸುವ ಕಲಾಕೃತಿಗಳು, ಕರಕುಶಲ ವಸ್ತುಗಳು, ಆಹಾರ ಮಳಿಗೆಗಳು ಇತರೆ ಮಳಿಗೆ ಉದ್ಘಾಟಿಸಿ, ಕಲಾ ಪ್ರದರ್ಶನ ವೀಕ್ಷಿಸಿ ಮಾಹಿತಿ ಪಡೆದುಕೊಂಡರು.

**ವಿಕಲಚೇತನರಿಗಾಗಿ ವಿವಿಧ ಕ್ರೀಡಾ ಕೂಟ:** ಅಂಗವಿಕಲರಿಗಾಗಿ 100 ಮೀಟರ್ ಓಟ, 400 ಮೀಟರ್ ರಿಲೇ, ಸಾಫ್ಟ್‌ಬಾಲ್, ವೀಲ್‌ಚೇರ್ ರೇಸಿಂಗ್ ಮತ್ತು ಶಾರ್ಟ್‌ಪಟ್ ಸೇರಿದಂತೆ ಅನೇಕ ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು. ವಿಶೇಷ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ಹೆಚ್ಚಿನ ಸಾಧನೆ ಮಾಡಿದ ಅಂಗವಿಕಲರಿಗೆ ಸಿಆರ್‌ಸಿ ನಿರ್ದೇಶಕಿ ಶ್ರೀಮತಿ ಮಿನಾಕ್ಷಿ ಸ್ಪೂರ್ತಿದಾಯಕ ಹಿತ ನುಡಿಗನ್ನಾಡುವ ಮೂಲಕ ಹುರಿದುಂಬಿಸಿದರು.

## ಸೂರನಹಳ್ಳಿಯಲ್ಲಿ ಜಾಮೀಯ ಮಸೀದಿ ಉದ್ಘಾಟನೆ



» **ಚಳ್ಳಕೆರೆ**

ಕಳೆದ ಹಲವಾರು ದಶಕಗಳಿಂದ ಮುಸ್ಲಿಂ ಸಮುದಾಯ ಎಲ್ಲಾ ಸಮುದಾಯದೊಂದಿಗೆ ಪ್ರೀತಿ, ವಿಶ್ವಾಸದಿಂದ ತನ್ನ ಬದುಕನ್ನು ಹಂಚಿಕೊಂಡಿದೆ. ಅಭಿವೃದ್ಧಿಪರ ಚಿಂತನೆಗಳಿಗೆ ಈ ಭಾಗದ ಮುಸ್ಲಿಂ ಬಾಂಧವರಿಗೆ ಹಿಂದೂ ಸಮಾಜದ ಎಲ್ಲಾ ಬಂಧುಗಳು ಸಹಕಾರ ನೀಡುತ್ತಾ ಬಂದಿದ್ದಾರೆ. ಗ್ರಾಮೀಣ ಭಾಗದ ಜನರಲ್ಲಿ ಉತ್ತಮ ಸಾಮರಸ್ಯತೆಯನ್ನು ಕಾಣಬಹುದು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ಪರಶುರಾಮಪುರ ಹೋಬಳಿ, ಚೌಳೂರು ಪಂಚಾಯಿತಿ ವ್ಯಾಪ್ತಿಯ ಸೂರನಹಳ್ಳಿ ಗ್ರಾಮದಲ್ಲಿ ಅಲ್ಲಿನ ಮುಸ್ಲಿಂ ಸಮುದಾಯ ನಿರ್ಮಿಸಿದ ನೂತನ ಜಾಮೀಯ ಮಸೀದಿಯನ್ನು ಉದ್ಘಾಟಿಸಿ ಮಾತನಾಡಿದರು. ವಿಶೇಷವಾಗಿ ಇಂದಿನ ಕಾರ್ಯಕ್ರಮದಲ್ಲಿ ಬಿಜೆಪಿಯ ಮಾಜಿ ಅಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್‌ಭಾಗವಹಿಸಿ ಮಾರ್ಗದರ್ಶನ ನೀಡಿದ್ದಾರೆ. ಗ್ರಾಮೀಣ ಭಾಗದ ಸಾಮರಸ್ಯತೆಗೆ ಇದು ಉತ್ತಮ ಉದಾಹರಣೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಿಜೆಪಿ ಮಂಡಲ ಮಾಜಿ ಅಧ್ಯಕ್ಷ ಸೂರನಹಳ್ಳಿಶ್ರೀನಿವಾಸ್, ಕ್ಷೇತ್ರದ ಅಭಿವೃದ್ಧಿ ಕುರಿತಂತೆ ಶಾಸಕ ಟಿ.ರಘುಮೂರ್ತಿ ನಿರೀಕ್ಷೆಗೂ ಮೀರಿ ಉತ್ತಮ ಕಾಮಗಾರಿಗಳನ್ನು ಕೈಗೊಂಡಿದ್ದಾರೆ. ವಿಶೇಷವಾಗಿ ಈ ಭಾಗದ ಜನರಿಗೆ ಕುಡಿಯುವ ನೀರಿನ ಶಾಶ್ವತಪರಿಹಾರ ಒದಗಿಸುವ ನಿಟ್ಟಿನಲ್ಲಿ ಚೌಳೂರಿನ ಬಳಿ ಚೆಕ್‌ಡ್ಯಾಂ ನಿರ್ಮಿಸಿದ್ದಾರೆ. ಜನಪರ ಕಾಳಜಿ ಇರುವ ಶಾಸಕ ರಘುಮೂರ್ತಿ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಂ.ರಷೀದ್‌ಸಾಬ್ ಮಾತನಾಡಿ, ಗ್ರಾಮದಲ್ಲಿ ನಡೆದ ಈ ಕಾರ್ಯಕ್ರಮಕ್ಕೆ ಶಾಸಕರೂ ಸೇರಿದಂತೆ ವಿವಿಧ ಪಕ್ಷದ ಮುಖಂಡರು ಆಗಮಿಸಿ ನಮಗೆ ಶುಭಕೋರಿದ್ದಾರೆ. ಎಲ್ಲರ ಪ್ರೀತಿ, ವಿಶ್ವಾಸವನ್ನು ಗಳಿಸಲು ಸಾಧ್ಯವಾಗಿದೆ, ಇಂದಿಗೂ ಸಹ ಗ್ರಾಮದಲ್ಲಿ ಎಲ್ಲರೂ ಒಂದಾಗಿ ಹೋಗುವ ಪ್ರವೃತ್ತಿಯನ್ನು ಉಳಿಸಿಕೊಂಡು ಬಂದಿದ್ದೇವೆಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಿ.ಪಿ.ಪ್ರಕಾಶ್‌ಮೂರ್ತಿ, ಕಾಂಗ್ರೆಸ್ ಮುಖಂಡರಾದ ಚನ್ನಕೇಶವ, ಎಚ್.ಎಸ್.ಸೈಯದ್, ಜಯವೀರಚಾರಿ ಮುಂತಾದವರು ಉಪಸ್ಥಿತರಿದ್ದರು.

## ದೇವರ ಎತ್ತುಗಳ ಸಂರಕ್ಷಣಾ ಸಮಿತಿಯಿಂದ 50 ಸಾವಿರ ವೆಚ್ಚದ ಶೆಡ್ ನಿರ್ಮಾಣ



**ಚಳ್ಳಕೆರೆ:** ಕಳೆದ ಹಲವಾರು ವರ್ಷಗಳಿಂದ ನಾವು ಮಾಡುವ ಧಾರ್ಮಿಕ ಕಾರ್ಯಕ್ರಮಗಳಿಂದ ನಾವು ಪಾವನರಾಗುತ್ತೇವೆ. ಉತ್ತಮ ಸನ್ಮಾರ್ಗದಲ್ಲಿ ನಡೆಯುವ ಪ್ರತಿಯೊಬ್ಬರೂ ಭಗವಂತನ ಕೃಪೆಯನ್ನು ಗಳಿಸಬೇಕು. ನಮ್ಮ ದೇಶದ ಸಂಸ್ಕೃತಿ ಎಲ್ಲರಿಗೂ ಮಾದರಿಯಾಗಿದ್ದು ನಾವೆಲ್ಲರೂ ದೇವರ ಸ್ವರೂಪವಾದ ಗೋಮಾತೆಯನ್ನು ಪೂಜಿಸುವುದಲ್ಲದೆ, ಅವುಗಳಿಗೆ ಸೂಕ್ತ ರಕ್ಷಣೆಯನ್ನು ಸಹ ಒದಗಿಸಬೇಕೆಂದು ನರಹರಿ ಸದ್ಗುರು ಆಶ್ರಮದ ಪೀಠಾಧ್ಯಕ್ಷ ವೈ.ರಾಜರಾಂ ತಿಳಿಸಿದರು. ಅಜ್ಜಯ್ಯನಗುಡಿ ಬಳಿ ಇರುವ ನನ್ನಿವಾಳ ಕಟ್ಟಮನೆಗೆ ಸೇರಿದ ಮುತ್ತಯ್ಯಗಳ ದೇವರ ಎತ್ತುಗಳಿಗಾಗಿ ದೇವರಎತ್ತುಗಳ ಸಂರಕ್ಷಣಾ ಸಮಿತಿ ಸದಸ್ಯರು ಸುಮಾರು 50 ಸಾವಿರ ವೆಚ್ಚದಲ್ಲಿ ನಿರ್ಮಿಸಿದ ನೂತನ ಶೆಡನ್ನು ಉದ್ಘಾಟಿಸಿ ಮಾತನಾಡಿದರು. ಶೆಡ್‌ನ ನಿರ್ಮಾಣ ಕಾರ್ಯದಲ್ಲಿ ಭಾಗವಹಿಸಿದ ಎಲ್ಲಾ ಸದಸ್ಯರನ್ನು ಅಭಿನಂದಿಸಿದ ಸ್ವಾಮೀಜಿಯವರು ನಿಮ್ಮ ಈ ಜನಪರ ಕಾಳಜಿ ಹೀಗೆ ಮುಂದುವರೆಯಲಿ ಎಂದರು. ಬನಶ್ರೀವೃದ್ಧಾಶ್ರಮದ ಮಂಜುಳಮ್ಮ, ವೀರಶೈವ ಮಹಿಳಾಸಂಘದ ಕಾರ್ಯದರ್ಶಿ ಮಂಜುಳಾರಾಜ್, ಪದ್ಮಗೋವಿಂದರಾಜು, ಶುಭಸೋಮಶೇಖರ್, ಪಶುವೈದ್ಯಾಧಿಕಾರಿ ಶ್ರೀನಿವಾಸ್‌ಬಾಬು, ಕಿಲಾರಿ ಪಾಲಯ್ಯ, ಸಿದ್ದೇಶ್, ಗಿಡ್ಡೋಬ್ಬಯ್ಯ, ಓಬಯ್ಯ, ಚಿನ್ನಯ್ಯ, ಬೋರಯ್ಯ ಮುಂತಾದವರು ಉಪಸ್ಥಿತರಿದ್ದರು.

## ವೃದ್ಧನಿಗೆ ಚಿಕಿತ್ಸೆ ಕೊಡಿಸಿದ ನ್ಯಾ.ವೇಲಾ



**ದಾವಣಗೆರೆ:** ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಶನಿವಾರ ಮಧ್ಯಾಹ್ನ ಹರಿಹರ ನ್ಯಾಯಾಲಯಕ್ಕೆ ಆಗಮಿಸಿದ ಸಮಯದಲ್ಲಿ ದೊಡ್ಡಬತಿ ಸಮೀಪದ ಮಂದಾರ ಶಾಲೆಯ ಹತ್ತಿರದ ಮುಖ್ಯರಸ್ತೆಯಲ್ಲಿ ವೃದ್ಧರೊಬ್ಬರು ನಿತ್ರಾಣಗೊಂಡು ರಸ್ತೆ ಬದಿಯಲ್ಲೇ ಬಿದ್ದಿದ್ದನ್ನು ಕಂಡು ಅವರನ್ನು ಹರಿಹರದ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿ ಮಾನವೀತೆ ಮೆರೆದಿದ್ದಾರೆ.

## ಪ್ರಮುಖ ಸುದ್ದಿ

# ರೈತರಿಗೆ ಸೌಲಭ್ಯ ಒದಗಿಸಲು ಶಾಸಕರ ಸೂಚನೆ



» **ಚಳ್ಳಕೆರೆ**

ಮುಂಗಾರು ಹಂಗಾಮು ಈಗಾಗಲೇ ಆರಂಭವಾಗಿದ್ದು, ರೈತರ ಸಮುದಾಯಕ್ಕೆ ಅಗತ್ಯವಾಗಿ ಬೇಕಾದ ಗೊಬ್ಬರ, ಬೀಜ, ಕ್ರಿಮಿನಾಶ ಹಾಗೂ ಇತರೆ ರೈತೋಪಯೋಗಿ ವಸ್ತುಗಳು ಸಕಾಲದಲ್ಲಿ ರೈತರಿಗೆ ತಲುಪುವಂತಾಗಬೇಕು. ರೈತ ಸಮುದಾಯಕ್ಕೆ ಸೂಕ್ತ ಮಾರ್ಗದರ್ಶನ ನೀಡಿ, ಆರ್ಥಿಕ ಸದೃಢತೆಯನ್ನು ಕಾಪಾಡಿಕೊಳ್ಳಲು ರೈತ ಸಮುದಾಯಕ್ಕೆ ನೆರವಾಗಿ ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಕೃಷಿ ಇಲಾಖೆ ಹಮ್ಮಿಕೊಂಡಿದ್ದ ಆತ್ಮಯೋಜನೆಯಡಿ ರೈತ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪ್ರಸ್ತುತ ವರ್ಷದಲ್ಲಿ ಪ್ರಾರಂಭಿಕ ಮಳೆ ಉತ್ತಮವಾಗಿದ್ದು ರೈತರು ತಮ್ಮ ಬೆಳೆಯನ್ನು ಬೆಳೆಸಲು ಇದು ಸಕಾಲವಾಗಿದೆ. ತಾಲ್ಲೂಕಿನಾದ್ಯಂತ ಈಗಾಗಲೇ ಕೃಷಿ ಚಟುವಟಿಕೆಗಳು ಆರಂಭವಾದ ಬಗ್ಗೆ ಮಾಹಿತಿ ಬಂದಿದೆ. ರೈತರಿಗೆ ಅಗತ್ಯವಿರುವ ಬೀಜ, ಗೊಬ್ಬರ ಸೇರಿದಂತೆ ಎಲ್ಲಾ ಅಗತ್ಯ ಸಲಕರಣೆಗಳು ರೈತರಿಗೆ ನೀಡುವ ವ್ಯವಸ್ಥೆಯಾಗಬೇಕು. ರೈತರು ಗೊಬ್ಬರ, ಬೀಜಕ್ಕಾಗಿ ಅಲೆದಾಡುವ ಸ್ಥಿತಿ ನಿರ್ಮಾಣವಾಗಬಾರದು. ಈ ಬಗ್ಗೆ ಇಲಾಖೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಅಖಂಡ ಕರ್ನಾಟಕ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಸೋಮಗುದ್ದುರಂಗಸ್ವಾಮಿ, ಕೃಷಿ ಇಲಾಖೆ ಸಹಯೋಗದೊಂದಿಗೆ ರೈತ ಸಂವಾದ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಂತಸ ವಿಷಯ. ರೈತರು ಈಗಾಗಲೇ ಕೃಷಿ ಚಟುವಟಿಕೆ ಆರಂಭಿಸಿದ್ದಾರೆ. ಅಲ್ಪಸ್ವಲ್ಪ ಬಿತ್ತನೆಯೂ ಸಹ ಆಗಿದೆ. ಆದರೆ, ಮತ್ತೆ ಕೈಕೊಡುವ ಸಂಭವ ಹೆಚ್ಚಾಗಿದೆ. ಮಳೆ ಬಂದರೆ ರೈತರು ಮತ್ತೊಮ್ಮೆ ಸಂಕಷ್ಟಕ್ಕೀಡಾಡುತ್ತಾರೆ. ಕೃಷಿ ಇಲಾಖೆ ಕಳೆದ ವರ್ಷ ಬೆಳೆವಿಮೆ ದಾಖಲಾತಿಗಳನ್ನು ಪೂರೈಸುವಲ್ಲಿ ವಿಳಂಬವಾಗಿದ್ದಕ್ಕೆ ಹಲವಾರು ರೈತರಿಗೆ ಇನ್ನೂ ಪರಿಹಾರ ದೊರೆತಿಲ್ಲವೆಂದರು.

ಕರ್ನಾಟಕ ರೈತ ಸಂಘ ಹಾಗೂ ಹಸಿರುಸೇನೆ(ಪ್ರೊ.ಬಣ)ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ಮಾತನಾಡಿ, ಶಾಸಕ ನೇತೃತ್ವದಲ್ಲಿ ಸಭೆಕರೆದು ಮಾತನಾಡಿರುವುದು ಸಂತಸ ಸಂಗತಿ. ಇತ್ತೀಚಿಗಷ್ಟೇ ರೈತರು ತಮ್ಮ ಸಮಸ್ಯೆ ಹೇಳಿಕೊಳ್ಳಲು ತಾಲ್ಲೂಕು ಪಂಚಾಯಿತಿಯಲ್ಲಿ ನಡೆದ ಸಭಾಂಗಣದಲ್ಲಿ ಅವಕಾಶ ನೀಡಿಲಿಲ್ಲ. ಇದರಿಂದ ರೈತರಿಗೆ ಬೇಸರವಾಗಿತ್ತು, ಶಾಸಕರು ಕೂಡಲೇ ಮಧ್ಯಸ್ಥಿತಿಗೆ ವಹಿಸಿ ಸಂವಾದ ಕಾರ್ಯಕ್ರಮ ಏರ್ಪಡಿಸಿದ್ದಾರೆ. ಮಳೆ ಕೈಕೊಟ್ಟು ಬೆಳೆನಷ್ಟವಾದರೆ ಹೆಚ್ಚು ಪರಿಹಾರ ದೊರಕಿಸಿಕೊಡುವ ನಿಟ್ಟಿನಲ್ಲಿ ಅಧಿಕಾರಿ ವರ್ಗ ಕಾರ್ಯನಿರ್ವಹಿಸಬೇಕೆಂದರು.

ಸಭೆಯಲ್ಲಿ ಜಿಲ್ಲಾ ಕೃಷಿ ಇಲಾಖೆ ಜಂಟಿನಿರ್ದೇಶಕ ಡಾ.ಬಿ.ಮಂಜುನಾಥ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ತಹಶೀಲ್ದಾರ್ ರೇಹಾನ್‌ಪಾಷ, ಗ್ಯಾರಂಟಿ ಸಮಿತಿ ತಾಲ್ಲೂಕು ಅಧ್ಯಕ್ಷ ಗದ್ದಗೆತಿಪ್ಪೇಸ್ವಾಮಿ, ನಗರಸಭಾ ಸದಸ್ಯರಾದ ಕವಿತಾಬೋರಯ್ಯ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T